ಕಲ್ಯಾಣ ಕರ್ನಾಟಕದ ಪ್ರತಿಬಿಂಬ......

ವಿಜಯನಗರ ಜಿಲ್ಲಾ ಆವೃತ್ತಿ

# ವಾರ್ತಾ ಲೋಕ

"VARTHA LOKA" Kannada Daily Morning News Paper, VIJAYNAGAR. Dist.: Vijaynagar

ಕನ್ನಡ ದಿನಪತ್ರಿಕೆ

ಕೊಪ್ಪಳ | ರಾಯಚೂರು | ಬಳ್ಳಾರಿ | ವಿಜಯನಗರ | ಯಾದಗಿರಿ | ಬೆಂಗಳೂರು | ಬೀದರ ಹಾಗೂ ಕಲಬುರ್ಗಿ ಜಿಲ್ಲೆಯಲ್ಲಿ ಏಕಕಾಲಕ್ಕೆ ಪ್ರಕಾಶಿತ

ಸಂಪಾದಕರು: ಎಸ್. ವಿ. ಕುಲಕರ್ಣಿ ಜಿ. ಸ್ಥಾನಿಕ ಸಂಪಾದಕರು: ಮೊಹಮ್ಮದ ಜಿಲಾನ ಜಿ.

E-mail ID : varthalokahpt@gmail.com

ವಾರ್ತಾ ಲೋಕ
ಕನ್ನಡ ದಿನ ಪತ್ರಿಕೆ ಕಛೇರಿ
ರಾಜಾಸಾಬ ಕಂಪೌಂಡ್,
ಕುಲಾಯಪ್ಪ ಬಿಲ್ಡಿಂಗ್
ಎದುರುಗಡೆ, 1ನೇ ಕ್ರಾಸ್
ಪಟೇಲ್ ನಗರ,
ಹೊಸಪೇಟೆ
ಮೊ.ನಂ : 9482156289

VOLUME : 01 | ISSUE : 142 | Thursday 17-10-2024 | RNI No.: KARKAN/2010/47633 | Page : 4+II | Mob. No. : 9482156289 | Price : ₹3/-

## ಸಂಕ್ಷಿಪ್ತ ವಾರ್ತೆ

### ಕೆರೆಗೆ ಬಾಗಿಣ ಅರ್ಪಿಸಿದ ಗ್ರಾಮಸ್ಥರು ಮುತ್ತೈದೆಯರು

● ವಾರ್ತಾಲೋಕ ವಾರ್ತೆ



**ಕೂಡ್ಲಿಗಿ: ಅ16.** ತಾಲೂಕಿನ ಅಮ್ಮನಕೇರಿ ಗ್ರಾಮದ ಕೆರೆ ಕೋಡಿ ಬಿದ್ದಿರುವ ಹಿನ್ನೆಲೆಯಲ್ಲಿ. ಗ್ರಾಮದ ಮುತ್ತೈದೆಯರು ಹಾಗೂ ಗ್ರಾಮಸ್ಥರು ಕೆರೆಗೆ ಬಾಗೀನ ಅರ್ಪಿಸಿ ಗಂಗೆ ಪೂಜೆ ನೆರವೇರಿಸಿದ್ದಾರೆ. ಕಳೆದ ಮುವತ್ತೈದು ವರ್ಷಗಳಿಂದ ಕೆರೆ ತುಂಬಿ ಕೋಡಿ ಹರಿದಿದ್ದಿಲ್ಲ, ಈ ವರ್ಷದಲ್ಲಿ ಮಳೆ ಚೆನ್ನಾಗಿ ಬಂದಿರುವ ಹಿನ್ನಲೆಯಲ್ಲಿ. ಈ ಭಾರಿ ಸತತ ಸುರಿದ ಮಳೆಯಿಂದಾಗಿ ಕೆರೆ ತುಂಬಿ ಕೋಡಿ ಬಿದ್ದಿದ್ದು, ಗ್ರಾಮಸ್ಥರಲ್ಲಿ ಅತೀವ ಸಂತಸ ತಂದಿದ್ದು ರೈತರಲ್ಲಿ ಸಂಭ್ರಮ ಮನೆ ಮಾಡಿದೆ.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರು, ಹಾಗೂ ಹಿರಿಯ ಜಂಗಮರ ನೇತೃತ್ವದಲ್ಲಿ. ಗ್ರಾಮದ ಮುತ್ತೈದೆಯರು ಮಹಿಳೆಯರು, ಗ್ರಾಮಸ್ಥರು . ಧಾರ್ಮಿಕ ನಿಯಮಾನುಸಾರ ಕೆರೆಗೆ ಬಾಗೀನ ಅರ್ಪಿಸಿದ್ದು, ಗಂಗೆ ಪೂಜೆ ನೆರವೇರಿಸಿ ಭಕ್ತಿ ಸಮರ್ಪಿಸಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಸಿದ್ದಯ್ಯ, ಮಡಿಕಿ ಚೌಡಪ್ಪ, ತಳವಾರ ಬಸಪ್ಪ. ಗ್ರಾಮ ಪಂಚಾಯ್ತಿ ಸದಸ್ಯರಾದ, ಶ್ರೀಮತಿ
ಎಸ್.ಸುಧಾ ಬಸವರಾಜ. ಶಿಕ್ಷಕರಾದ ಯರ್ರಿಬಸಪ್ಪ, ವೀರನಗೌಡ್ರು, ಚನ್ನಬಸವನಗೌಡ್ರು, ಹೆಚ್ಎಮ್.ಕೊಟ್ರೇಶ ಸ್ವಾಮಿ, ಬಣಕಾರ ಸಿದ್ದಪ್ಪ , ಗುರಿಕಾರ ಬಸವರಾಜ, ಕೋಡಿಹಳ್ಳಿ ಚನ್ನಬಸಪ್ಪ, ಸಿರಿಬಿ ಬಸವರಾಜ, ಕಂಪ್ಲಿ ಚನ್ನಬಸಪ್ಪ ಸೇರಿದಂತೆ. ಗ್ರಾಮದ ಮುತ್ತೈದೆಯರು, ಮಹಿಳಾ ಸಂಘಟನೆಗಳ ಪದಾಧಿಕಾರಿಗಳು. ಗ್ರಾಮದ ಹಿರಿಯರು ಹಾಗೂ ಗ್ರಾಮಸ್ಥರು ವಿವಿದ ಸಮುದಾಯಗಳ ಮುಖಂಡರು.

ಇನ್ನಿತರರು ಭಾಗವಿಸಿದ್ದರು. ವರದಿ ಎಚ್ ವೀರಣ್ಣ.

### ಬಿ.ನಾಗೇಂದ್ರ ಜೈಲಿನಿಂದ ಬಿಡುಗಡೆ ಕನಕದುರ್ಗಮ್ಮ ತಾಯಿಗೆ ವಿಶೇಷ ಪೂಜೆ ಸಲ್ಲಿಸಿ 1011 ತೆಂಗಿನಕಾಯಿ ಹೊಡೆದ ಎಂ.ಜಿ ಕನಕ ಮತ್ತು ಸ್ನೇಹಿತರು



● ವಾರ್ತಾಲೋಕ ವಾರ್ತೆ

**ಬಳ್ಳಾರಿ: ಅ16.** ಬಳ್ಳಾರಿ ಗ್ರಾಮೀಣ ಶಾಸಕರು ಹಾಗೂ ಮಾಜಿ ಸಚಿವರಾದ ಬಿ.ನಾಗೇಂದ್ರ ಅವರು ಜೈಲಿನಿಂದ ಜಾಮೀನಿನ ಮೇಲೆ ಬಿಡುಗಡೆ ಬಂದಿದ್ದರಿಂದ ಬಳ್ಳಾರಿಯ ಅವರ ಅಭಿಮಾನಿಗಳಾದ ಕನಕ ಮತ್ತು ಸ್ನೇಹಿತರು ನಗರದ ಅತಿ ದೇವತೆ ಶ್ರೀ ಕನಕ ದುರ್ಗಮ್ಮ ತಾಯಿಗೆ ವಿಶೇಷ ಪೂಜೆ ಸಲ್ಲಿಸಿ 1011 ತೆಂಗಿನ ಕಾಯಿ ಪಡೆದು ಹರಕೆಯನ್ನು ತೀರಿಸಿದರು.

ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಬಿಡುಗಡೆ ಆಗಿರುವುದು ನಮಗೆಲ್ಲಾ ಸೇರಿದಂತೆ ಅವರ ಅಭಿಮಾನಿಗಳಿಗೆ ಬಹಳ ಸಂತೋಷದ ವಿಷಯ. ಅವರು ಬಿಡುಗಡೆಯಾದ ಹಿನ್ನೆಲೆ ಇಂದು ಬಳ್ಳಾರಿ ನಗರದ ಆದಿ ದೇವತೆ ಶ್ರೀ ಕನಕ ದುರ್ಗಮ್ಮ ತಾಯಿಗೆ ವಿಶೇಷ ಪೂಜೆ ಸಲ್ಲಿಸಿ 1011 ತೆಂಗಿನಕಾಯಿ ಹೊಡೆಯುವ ಮೂಲಕ ಬಿ.ನಾಗೇಂದ್ರ ಅಣ್ಣನವರನ್ನು ಆತ್ಮೀಯವಾಗಿ ಸ್ವಾಗತಿಸುತ್ತೇವೆ ಎಂದರು.

ಈ ಸಂದರ್ಭದಲ್ಲಿ ಬಿ.ನಾಗೇಂದ್ರ ಅವರ ಅಭಿಮಾನಿಗಳ ಸಂಘದ ಬಳ್ಳಾರಿ ಜಿಲ್ಲಾ ಅಧ್ಯಕ್ಷರಾದ ಬಿ.ಮಾರುತಿ ಅಭಿಮಾನಿಗಳಾದ ಹಲಕುಂದಿ ಕೇಶವ, ರೂಪನಗುಡಿ ಉಮೇಶ್, ಅಸುಂಡಿ ಶಿವು, ಹರಗಿಣಿಡೋಣಿ ಗಾದಿ, ಚೇಳ್ಳಗುರ್ಕಿ ನಾಗರಾಜ್, ಎಂ.ಡಿ ನೂರ್, ಸುನೀಲ್, ವಾಲಿಭಾಷಾ, ವಿಕ್ರಂ, ಎರ್ರಿಸ್ವಾಮಿ, ರಾಮಲಿಂಗ ಸೇರಿದಂತೆ ಅವರ ಅಪಾರ ಅಭಿಮಾನಿಗಳು ಉಪಸ್ಥಿತರಿದ್ದರು.




● ವಾರ್ತಾಲೋಕ ವಾರ್ತೆ

**ಬಳ್ಳಾರಿ. ಅ16** ನಗರದ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕೆ ಸಂಸ್ಥೆಯ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಯಶ್ವವಂತ್ ರಾಜ್ ನಾಗಿರೆಡ್ಡಿ ಅವರನ್ನು ಅವರ ಕಚೇರಿಯಲ್ಲಿ ಮಹಾದೇವ ತಾತ ಕಲಾ ಸಂಘ (ರಿ)ಹಂದ್ಯಾಳು ವತಿಯಿಂದ ಕಲಾ ಸಂಘದ ಅಧ್ಯಕ್ಷರಾದ ಪುರಷೋತ್ತಮ ಹಂದ್ಯಾಳು ಸನ್ಮಾನಿಸಿ ಗೌರವಿಸಿದರು ಈ ಸಂದರ್ಭದಲ್ಲಿ ಸಂಸ್ಥೆಯ ಸಹ ಕಾರ್ಯದರ್ಶಿಗಳಾದ ಮರ್ಚೇಡ್ ಮಲ್ಲಿಕಾರ್ಜುನಗೌಡ, ರಾಮಚಂದ್ರ , ಕಾರ್ಯಕಾರಿಸಮಿತಿ ಸದಸ್ಯ ಎನ್. ರಮೇಶ ಇದ್ದರು.

# ಒಳ ಮೀಸಲಾತಿ ಜಾರಿ ಮಾಡದಿದ್ದಲ್ಲಿ ಕಾಂಗ್ರೆಸ್ಗೆ ತಕ್ಕ ಪಾಠ

## ಸಂಡೂರಿನಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನು ಸೋಲಿಸುತ್ತೇವೆ : ಕೆ. ಪಿ. ಉಮಾಪತಿ

● ವಾರ್ತಾಲೋಕ ವಾರ್ತೆ





**ಹೊಸಪೇಟೆ:** ಒಳ ಮೀಸಲಾತಿ ಜಾರಿಗಾಗಿ ವಿಜಯನಗರ ಜಿಲ್ಲಾ ಒಳ ಮೀಸಲಾತಿ ಹೋರಾಟ ಸಮಿತಿಯಿಂದ ನಗರದಲ್ಲಿ ಹೋರಾಟವನ್ನು ಹಮ್ಮಿಕೊಂಡಿದ್ದರು ಹಲವಾರು ದಲಿತ ಸಂಘಟನೆಗಳ ಮುಖಂಡರು ಸಾವಿರಾರು ಸಂಖ್ಯೆಯಲ್ಲಿ ಸೇರಿ ನಗರದ ಮುಖ್ಯ ರಸ್ತೆಗಳಲ್ಲಿ ಬೈಕ್ ರ್ಯಾಲಿ ಮಾಡಿ ಮತ್ತು ಕಾಲ್ನಡಿಗೆಯ ಮುಖಾಂತರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತ ಸಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ತಲುಪಿ ರಾಜ್ಯಪಾಲರು ಹಾಗೂ ಮುಖ್ಯಮಂತ್ರಿಗಳಿಗೆ ಜಿಲ್ಲಾಧಿಕಾರಿಗಳ ಮುಖಾಂತರ ಒಳ ಮೀಸಲಾತಿ ಜಾರಿಯ ಹಕ್ಕೋತ್ತಾಯದ ಮನಿ ಪತ್ರ ಜಿಲ್ಲಾಧಿಕಾರಿಗೆ ಸಲ್ಲಿಸಿದರು.

ಅಂಬೇಡ್ಕರ್ ಸಂಘದ ಜಿಲ್ಲಾಧ್ಯಕ್ಷರಾದ ಕೆ.ಪಿ.ಉಮಾಪತಿ ಮಾತನಾಡಿ ಒಳ ಮೀಸಲಾತಿ ಜಾರಿಗಾಗಿ ಸುಪ್ರೀಂ ಕೋರ್ಟ್ ರಾಜ್ಯ ಸರಕಾರಕ್ಕೆ ಆದೇಶ ನೀಡಿದ್ದರೂ ಇನ್ನೂ ವಿಳಂಬ ಮಾಡುತ್ತಿದ್ದಾರೆ. ಸರ್ಕಾರದ ವಿರುದ್ಧ ನಾವು ಹೋರಾಟ ಮಾಡುವ ಸ್ಥಿತಿ ಬಂದಿದೆ. ನಾವು ಯಾರ ಹತ್ತಿರ ನ್ಯಾಯ ಕೇಳಬೇಕೆಂದು ಗೊತ್ತಾಗುತ್ತಿಲ್ಲ ಸರ್ಕಾರ ಮುಂದಿನ ಸಚಿವ ಸಂಪುಟದಲ್ಲಿ ಚರ್ಚಿಸಿ ಒಳ ಮೀಸಲಾತಿ ಜಾರಿ ಮಾಡಬೇಕು.

ಸರ್ಕಾರ ಸುಪ್ರೀಂ ಕೋರ್ಟ್ ಆದೇಶವನ್ನು ಪಾಲನೆ ಮಾಡಬೇಕಾಗಿದೆ, ಹಿಂದೆ ನಮಗೆ ಅಧಿಕಾರವಿಲ್ಲ ಎಂದು

ಜಾರಿಗೊಳಿಸಬೇಕಿದೆ.

ನ್ಯಾಯಮೂರ್ತಿ ಶ್ರೀ. ಎ. ಜೆ. ಸದಾಶಿವ ಆಯೋಗದ ಮೂಲ ಆಶಯವನ್ನು ಉಳಿಸಿಕೊಂಡು 2011ರ ಜನಗಣತಿಯ ಸಂಖ್ಯಾಧಾರಗಳು ಮತ್ತು ನ್ಯಾಯಮೂರ್ತಿ ಶ್ರೀ ನಾಗಮೋಹನದಾಸ್ ಆಯೋಗದ ವರದಿಯಂತ ವಿಸ್ತರಿಸಲಾದ 17% ರ ಮೀಸಲಾತಿಯನ್ನು ಬಳಸಿಕೊಂಡು ಉಪವರ್ಗೀಕರಣದ ಸೂಕ್ಷ್ಮ ರೂಪಿಸಲಾಗಿದೆ. 2011ರ ಜನಗಣತಿಯ ವರದಿಯಂತೆ ಕರ್ನಾಟಕದಲ್ಲಿ ಎಸ್.ಸಿ ಜನಸಂಖ್ಯೆ 1,04,74,992. ಇದೆ. ಈಗಿರುವ ಶೇ.178ರ ಮೀಸಲಾತಿಯನ್ನು ವರ್ಗೀಕರಿಸಿದರೆ ತಲಾ 6ಲಕ್ಷ ಜನಸಂಖ್ಯೆಗೆ ಶೇ:1% ರಷ್ಟು ಮೀಸಲಾತಿ ದೊರಕುತ್ತದೆ.

ಈ ಹಿನ್ನಲೆಯಲ್ಲಿ ಕೆಳಕಂಡಂತೆ ಶೇ 17% ರ ಮೀಸಲಾತಿಯ ವರ್ಗೀಕರಣಗೊಳಿಸುವುದು

ಗುಂಪು: ಶೇ 6% ಮಾದಿಗ ಮತ್ತು ಮಾದಿಗೆ ಸಂಬಂಧಿತ ಜಾತಿಗಳು 29

ಹೇಳುತ್ತಿದ್ದರು. ಆದರೆ ಈಗ ಸುಪ್ರೀಂ ಕೋರ್ಟ್ ಆದೇಶ ನೀಡಿದೆ. ಮತ್ತೆ ಅದರ ವಿರುದ್ಧ ಪುನರ್ ಪರಿಶೀಲಕ್ಕಾಗಿ ಅರ್ಜಿಯನ್ನು ಹಾಕಿದ್ದರು ಅದು ಕೂಡ ತಿರಸ್ಕೃತಗೊಂಡಿದೆ, ಇನ್ನು ನಾವು ಹೋರಾಟದ ಅಂತಿಮ ರೂಪೇಷಕ್ಕೆ ಬಂದಿದ್ದೇವೆ ಮುಂದೆ ಏನಾದರೂ ಇದೇ ರೀತಿ ವಿಳಂಬ ಮಾಡಿದಲ್ಲಿ ರಾಜ್ಯಾದ್ಯಂತ ಉಗ್ರವಾದ ಹೋರಾಟವನ್ನು ಹಮ್ಮಿಕೊಳ್ಳ ಬೇಕಾಗುತ್ತದೆ, ಹೊಸಪೇಟೆಯನ್ನು ಬಂದ್ ಕರೆಗೆ ಕೊಡಬೇಕಾಗುತ್ತದೆ. ಒಸ ಮೀಸಲಾತಿ ಜಾರಿ ಮಾಡದೆ ಹೋದರೆ ಮುಂದಿನ ಉಪಚುನಾವಣೆ ನಡೆಯುವ ಸಂಡೂರಿನಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳನ್ನು ಸೋಲಿಸಿ ನಿಮಗೆ ಎಚ್ಚರಿಕೆ ಗಂಟೆ ನೀಡುತ್ತೇವೆ ಎಂದರು.

ಕೊಟ್ಟಿಗೆನಾಳ ಮಲ್ಲಿಕಾರ್ಜುನ ಮಾತನಾಡಿ ರಾಜ್ಯ ಸರ್ಕಾರಗಳು ದೇಶದ ಕಾನೂನನ್ನು ಗೌರವಿಸುತ್ತಿದ್ದರೆ, ಸಂವಿಧಾನ ರಕ್ಷಕರು ಎಂದು ಹೇಳಿಕೊಳ್ಳುತ್ತಿದ್ದಾರ. ಒಳ

ಇದ್ದು ಒಟ್ಟು ಜನಸಂಖ್ಯೆ 32.60,234, ಗುಂಪು:2 ಶೇ 5.5% ಹೊಲೆಯ ಮತ್ತು ಸಂಬಂಧಿತ ಉಪಜಾತಿಗಳು 26 ಒಟ್ಟು ಜನಸಂಖ್ಯೆ 32,59,482.

ಗುಂಪು:3 ಶೇ 4.5% ಭೋವಿ, ಬಂಜಾರ, ಕೊರಮ, ಕೊರಚ, ಜಾತಿ ಉಪಜಾತಿಯಗಳು 19 ಜಾತಿಗಳು ಒಟ್ಟು ಜನಸಂಖ್ಯೆ 26,51,067.

ಗುಂಪು: 4 ಶೇ 18 ಅಸ್ಪೃಶ್ಯ ಜಾತಿಯ ಮಾದಿಗ ಮತ್ತು ಹೊಲೆಯ ಸಂಬಂಧಿತ ಸಣ್ಣ ಸಣ್ಣ ಜಾತಿಗಳು ಮತ್ತು ಅಲೆಮಾರಿ ಜಾತಿಗಳು 83 ಒಟ್ಟು ಜನಸಂಖ್ಯೆ 5,85,570. ಹೊಲೆಯ ಮತ್ತು ಮಾದಿಗ ಜನಸಂಖ್ಯೆಯು ಬಹುತೇಕ ಸಮಾನವಾಗಿದೆ. ಆದರೆ ನ್ಯಾಯಮೂರ್ತಿ ಶ್ರೀ ಎ. ಜೆ. ಸದಾಶಿವ ಆಯೋಗ ಉಲ್ಲೇಖಿಸುವಂತೆ ಮಾದಿಗ ಉಪಜಾತಿಗಳು ಹೆಚ್ಚು ಸಂತ್ರಸ್ತ ಸಮುದಾಯವೆನಿಸಿವೆ. ದೇವದಾಸಿಯರು, ಜೀತಕ್ಕೆ ಸಿಲುಕಿದವರು. ಅರ್ಧಕ್ಕೆ ಶಾಲೆಯನ್ನು ಬಿಟ್ಟವರು, ಬಾಲಪರಾಧಿಗಳು

ಮೀಸಲಾತಿಯನ್ನು ಜಾರಿ ಮಾಡುವುದರ ಮೂಲಕ ಅವರ ಈ ನಿಲುವನ್ನು ನಿರೂಲಿಸಲಿ.

ಸರ್ಕಾರಕ್ಕೆ ಬದ್ಧತೆ ಇದ್ದರೆ ಒಳ ಮೀಸಲಾತಿ ಜಾರಿ ಮಾಡಲಿ, ಚುನಾವಣಾ ಪೂರ್ವದಲ್ಲಿ ಚಿತ್ರದುರ್ಗದ ಕಾಂಗ್ರೆಸ್ ಸಮಾವೇಶದಲ್ಲಿ ಒಳ ಮೀಸಲಾತಿ ಮಾಡುತ್ತೇವೆ ಎಂದು ಘೋಷಿಸಿ ತಮ್ಮ ಪಕ್ಷದ ಪ್ರಣಾಳಿಕೆಯಲ್ಲಿ ಅಳವಡಿಸಿಕೊಂಡಿದ್ದಾರೆ. ಮೊದಲ ಕ್ಯಾಬಿನೆಟ್ ನಲ್ಲಿ ಚರ್ಚಿಸಿ ಜಾರಿ ಮಾಡು ತ್ತೇವೆ ಎಂದು ಹೇಳಿದ್ದರು. ಇದನ್ನು ವಿರೋಧಿಸುವವರು ಯಾರು, ಸ್ಪರ್ಶ ಸಮುದಾಯದವರ ಅಥವಾ ಅಸ್ಪರ್ಶ ಸಮುದಾಯದವರ ಸ್ಪಷ್ಟ ಪಡಿಸಬೇಕು. ಮಲ್ಲಿಕಾರ್ಜುನ ಖರ್ಗೆ ಅವರು ತೆಲಂಗಾಣ ಮುಖ್ಯಮಂತ್ರಿ ರೇವಂತ ರೆಡ್ಡಿಯವರಿಗೆ ಕರೆ ಮಾಡಿ ಅಳಮಿಸಲಾತಿ ಜಾರಿ ತೀರ್ಮಾನ ತೆಗೆದುಕೊಳ್ಳಬೇಡಿ ಎಂದು ಹೇಳುತ್ತಾರೆ, ನಿಮ್ಮ ಮಗ ಗುಲ್ಬರ್ಗ ಜಿಲ್ಲೆಯನ್ನು ಹಾಳು ಮಾಡಿದ್ದಾರೆ ನೀವು

ಇಂತಹ ಪಟ್ಟಿಯ ಅಂಕಿ ಅಂಶಗಳಲ್ಲಿ ಮಾದಿಗ ಉಪಜಾತಿಗಳು ದೊಡ್ಡ ಸಂಖ್ಯೆಯಲ್ಲಿದ್ದಾರೆ. ಹೀಗಾಗಿ ಸಹಜವಾಗಿಯೇ ಈ ಗುಂಪಿಗೆ 0.5% ರಷ್ಟು ಹೆಚ್ಚು ಮೀಸಲಾತಿ ಕಲ್ಪಿಸಲಾಗಿದೆ. ನ್ಯಾ. ಎ. ಜೆ ಸದಾಶಿವ ಆಯೋಗದ ವರದಿ ಮತ್ತು 2011ರ ಜನಗಣತಿಯ ಸಂಖ್ಯಾಧಾರಗಳೊಂದಿಗೆ ಪುನರ್ ಪರಿಶೀಲಿಸಿ ವರದಿ ಕೊಡಲು ರಚಿಸಿದ ಅಂದಿನ ಸಚಿವ ಸಂಪುಟ ಉಪಸಮಿತಿಯ ಅಧ್ಯಕ್ಷರಾದ ಶ್ರೀ ಜೆ.ಸಿ. ಮಾಧುಸ್ವಾಮಿ, ಶ್ರೀ ಗೋವಿಂದ ಕಾರಜೋಳ, ಶ್ರೀ ಪ್ರಭು ಚವಾನ್, ಎಸ್ ಅಂಗಾರ್ , ಡಾ ಸುಧಾಕರ್ ಸಮಿತಿಯು ಅತ್ಯಂತ ವೈಜ್ಞಾನಿಕವಾಗಿ ನ್ಯಾಯಬದ್ಧವಾಗಿ ಕಾನೂನು ರೀತಿಯಲ್ಲಿ ವರದಿ ಕೊಟ್ಟಿರುವುದನ್ನು ಪ್ರಸ್ತುತ ಸರಕಾರವು ಮಾನ್ಯ ಮಾಡಿ ಕೂಡಲೇ ಒಳಮೀಸಲಾತಿ ಜಾರಿಗೊಳಿಸಬೇಕೆಂದು ಈ ಮೂಲಕ ಹಕ್ಕೊತ್ತಾಯದ ಮನವಿ ಪತ್ರವನ್ನು ಸಲ್ಲಿಸುತ್ತಿದ್ದೇವೆ.

ಹಕ್ಕೋತ್ತಾಯಗಳು :

ಇಂಡಿಯಾವನ್ನೇ ಹಾಳು ಮಾಡಲು ಹೊರಟಿದ್ದೀರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಒಳ ಮೀಸಲಾತಿಯನ್ನು ತಡೆಹಿಡಿದವರು ಮಲ್ಲಿಕಾರ್ಜುನ ಖರ್ಗೆ, ಹೆಚ್ ಸಿ ಮಾದೇವಪ್ಪ , ಪರಮೇಶ್ವರ್, ನಾವು ಕಾಂಗ್ರೆಸ್ ಪಕ್ಷದವರಿದ್ದರೂ ನಮಗೆ ಜನಾಂಗ ಮುಖ್ಯವಾಗುತ್ತದೆ, ಜನಾಂಗ ನಿಮಗೆಲ್ಲಾ ಕೊಟ್ಟಿದೆ ಮೊದಲು ನೀವು ಅಧಿಕಾರದಿಂದ ಹೊರಗೆ ಬನ್ನಿ, ನಮ್ಮ ಜನಗಳಿಗೆ ಮೋಸ ಮಾಡಬೇಡಿ ಎಂದರು.

ಮನವಿ ಪತ್ರದಲ್ಲಿ:

ಆಗಸ್ಟ್ 1. 2024 ರಂದು ಘನ ಸರ್ವೋಚ್ಚ ನ್ಯಾಯಾಲಯದ ಏಳು ಪೀಠದ ಪೂರ್ಣ ಪೀಠವು ಎಸ್ ಸಿ. ಮೀಸಲಾತಿ ಉಪವರ್ಗೀಕರಿಸಲು ಆಯಾ ರಾಜ್ಯ ಸರಕಾರಕ್ಕೆ ಸಂಪೂರ್ಣ ಹಕ್ಕಿದೆ ಎಂಬುದನ್ನು ಸಾಂವಿಧಾನಿಕ ಪೀಠವು ತೀರ್ಪು ನೀಡಿದೆ. ಸುಪ್ರೀಂ ಕೋರ್ಟ್ ತೀರ್ಪನ್ನು ಅವಕಾಶ ವಂಚಿತ ನಾಡಿನ ಶೋಷಿತ

1) 2023ರ ತನ್ನ ಚುನಾವಣೆ ಪ್ರಣಾಳಿಕೆಯಲ್ಲಿ 6ನೇ ಗ್ಯಾರಂಟಿ ಘೋಷಿಸಿದಂತೆ ಪ್ರಸ್ತುತ ಕಾಂಗ್ರೆಸ್ ಸರಕಾರವು ಆಗಸ್ಟ್ 1. 2024 ರಂದು ನೀಡಿದ ಸುಪ್ರೀಂ ಕೋರ್ಟ್ ತೀರ್ಪಿನಂತೆ ರಾಜ್ಯದಲ್ಲಿ ಒಳಮೀಸಲಾತಿ ಜಾರಿಗೊಳಿಸಬೇಕು.

2) ಒಳಮೀಸಲಾತಿ ಜಾರಿಯಾಗುವವರೆಗೆ ಯಾವುದೇ ಸರಕಾರಿ ಹುದ್ದೆಗಳು ಹಾಗೂ ಬ್ಯಾಕ್ ಲಾಗ್ ಹುದ್ದೆಗಳನ್ನು ತುಂಬಬಾರದು.

3) ಜನಗಣತಿ ವರದಿ ವಿಚಾರವನ್ನು ಮುನ್ನೆಲೆಗೆ ತಂದು ಎಸ್ ಸಿ.ಕಮೀಸಲಾತಿ ಜಾರಿಗೊಳಿಸುವಲ್ಲಿ ನಿರ್ಲಕ್ಷ ಧೋರಣೆ ಸಲ್ಲದು. ಮಾನ್ಯ ಸುಪ್ರೀಂ ಕೋರ್ಟ್ ತೀರ್ಪಿನ ಉಲ್ಲಂಘನೆಯ ಒಳ ಹುನ್ನಾರವನ್ನು ಮುಂದುವರಿಸಿದರೆ ಮುಂದೆ ಅತ್ಯಂತ ಗಂಭೀರ ಹೋರಾಟವನ್ನು ಸರಕಾರವು ಎದುರಿಸಬೇಕಾಗುತ್ತದೆ.

ಈಗಾಗಲೇ ಸಂವಿಧಾನ ಪರಿಚ್ಛೇದ 15(4)ನೇಯ ಹಾಗೂ 16(4) ನೇ

ಸಮುದಾಯದವರಾದ ನಾವು ಸ್ವಾಗತಿಸುತ್ತೇವೆ. ಕರ್ನಾಟಕ ಸರಕಾರದ ಪ್ರಸ್ತುತ ಕಾಂಗ್ರೆಸ್ ಪಕ್ಷವು ತನ್ನ 2023ರ ಚುನಾವಣಾ ಪ್ರಣಾಳಿಕೆಯಲ್ಲಿ 6ನೇ ಗ್ಯಾರಂಟಿ ಘೋಷಿಸಿಕೊಂಡಂತೆ ಸುಪ್ರೀಂ ಕೋರ್ಟ್ ತೀರ್ಪು ಆಧರಿಸಿ ರಾಜ್ಯದಲ್ಲಿ ಒಳಮೀಸಲಾತಿ ಜಾರಿಗೊಳಿಸಬೇಕಿದೆ. ಕರ್ನಾಟಕದಲ್ಲಿ ಎಸ್.ಸಿ ಮೀಸಲಾತಿಯಲ್ಲಿ ವರ್ಗೀಕರಿಸಿ ಒಳಮೀಸಲಾತಿ ಜಾರಿ ಮಾಡಬೇಕೆಂದು ಕಳೆದ ಮೂರು ದಶಕಗಳಿಗೂ ಹೆಚ್ಚು ಕಾಲ ಹೋರಾಟಗಳು ನಡೆದಿವೆ. ಹಿಂದಿನ ಬಿಜೆಪಿ ಸರಕಾರವು ಎಸ್.ಸಿ ಮೀಸಲಾತಿಯ ಎಲ್ಲಾ ಸಮುದಾಯದವರಾದ ನಾವು ವಿಶ್ವಾಸಕ್ಕೆ ತೆಗೆದುಕೊಂಡು ಹಲವು ಸುತ್ತಿನ ಮಾತುಕತೆ ನಡೆಸಿ ಜನಸಂಖ್ಯೆಗೆ ಅನುಗುಣವಾಗಿಯೇ ವೈಜ್ಞಾನಿಕವಾದ ಒಳಮೀಸಲಾತಿಯ ಸೂತ್ರವನ್ನು ಕೇಂದ್ರ ಸರಕಾರಕ್ಕೆ ಶಿಫಾರಸ್ಸು ಮಾಡಿರುವುದನ್ನೇ ಮಾನದಂಡವನ್ನಾಗಿಟ್ಟುಕೊಂಡು ರಾಜ್ಯ ಸರಕಾರವು ಒಳಮೀಸಲಾತಿ

ವಿಧಿಗಳ ಅಡಿಯಲ್ಲಿ ಅಧಿಕಾರವನ್ನು ಬಳಸಿ ರಾಜ್ಯ ಸರಕಾರಗಳು ಸಾಮಾಜಿಕ, ಆರ್ಥಿಕವಾಗಿ ಹಿಂದುಳಿದಿರುವಿಕೆಯನ್ನು ಗುರುತಿಸಿಕೊಂಡು ಮೀಸಲಾತಿಯಂತಹ ವಿಶೇಷ ಅವಕಾಶಗಳನ್ನು ಕಲ್ಪಿಸಲು ರಾಜ್ಯ ಸರಕಾರವು ಮುಕ್ತವಾಗಿದೆ ಎಂದು ಮಾನ್ಯ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳು ತಮ್ಮ ತೀರ್ಪಿನಲ್ಲಿ ಹೇಳಿದ್ದಾರೆ.

ಹಾಗಾಗಿ ಮಾನ್ಯ ಸುಪ್ರೀಂ ಕೋರ್ಟ್‌ನ ತೀರ್ಪಿನಂತೆ ಜಾರಿಮಾಡಬೇಕೆಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪೂರ್ಣಾನಂದ ಭಾರತಿ ಸ್ವಾಮೀಜಿ ವೀರಸ್ವಾಮಿ, ಜಗನ್ನಾಥ, ಕೆ ಲಕ್ಷ್ಮಣ, ಕೆ ಮಲ್ಲಿಕಾರ್ಜುನ, ರಾಘವೇಂದ್ರ ಹೆಚ್. ಸೋಮಶೇಖರ, ಕೊಲ್ಲಾಪುರಿ, ಭರತ್ ಕುಮಾರ್, ಸುಬ್ರಮಣ್ಯ, ವಿಜಯ್ ಕುಮಾರ್, ಶೇಕು, ಶೆಕ್ಷಾವಲಿ, ರಾಘು, ಸಣ್ಣಮಾರೆಪ್ಪ ಇತರ ಮುಖಂಡರು ಇದ್ದರು.

**ವರದಿ, ಲಕ್ಕಿಮರದ. ಮಂಜುನಾಥ**

## ಬಾಣಂತಿಯರು ಮತ್ತು ಗರ್ಭಿಣಿಯರು ಹೆಚ್ಚು ಪೌಷ್ಟಿಕ ಆಹಾರ ಇರುವ ಪದಾರ್ಥಗಳನ್ನು ಸೇವಿಸಬೇಕು.ಪಿ.ಬಿ. ಗಿರಿಜಾ



● ವಾರ್ತಾಲೋಕ ವಾರ್ತೆ

**ಕೂಡ್ಲಿಗಿ: ಅ16.** ಗರ್ಭಿಣಿಯರು, ಬಾಣಂತಿಯರು ಪ್ರತಿದಿನ ಊಟದಲ್ಲಿ ಕಬ್ಬಿಣಾಂಶ ಹೆಚ್ಚಿರುವ ಆಹಾರ ಪದಾರ್ಥ ಸೇವಿಸಬೇಕು ಎಂದು ಆರೋಗ್ಯ ಸುರಕ್ಷಣಾಧಿಕರಿ ಪಿ.ಬಿ. ಗಿರಿಜಾ ಹೇಳಿದರು.

ಪಟ್ಟಣದ 3ನೇ ವಾರ್ಡ್ ವಿದ್ಯಾನಗರದ ಅಂಗನವಾಡಿ ಕೇಂದ್ರದಲ್ಲಿ ಬುಧವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಿಮ್ಮಾಲಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಪೋಷಣ್ ಅಭಿಯಾನ ಯೋಜನೆಯಡಿ ಹಮ್ಮಿಕೊಂಡಿದ್ದ ಪೌಷ್ಟಿಕ ಆಹಾರ ಶಿಬಿರದಲ್ಲಿ ಮಾತನಾಡಿದ ಅವರು, ಗರ್ಭಿಣಿಯರು ನಿತ್ಯ ಸೇವಿಸುವ ಆಹಾರದಲ್ಲಿ ಸಾಕಷ್ಟು ಪೋಷಕಾಂಶಗಳು ಇರುವಂತೆ ನೋಡಿಕೊಳ್ಳಬೇಕು. ಸಾಮಾನ್ಯ ಮಹಿಳೆಗಿಂತ ಗರ್ಭಿಣಿಯರು ಮೂರು ಪಟ್ಟು ಹೆಚ್ಚು ಕ್ಯಾಲೋರಿಯುಕ್ತ ಆಹಾರ ಸೇವಿಸಬೇಕು.

ಶಕ್ತಿ ನೀಡುವ, ಪೋಷ ಕಾಂಶಗಳಿರುವ, ಕ್ಯಾಲ್ಸಿಯಂ ಮತ್ತು ಕಬ್ಬಿಣಾಂಶ ಇರುವ, ಧಾನ್ಯಗಳು, ಸಿರಿಧಾನ್ಯಗಳು, ಸೊಪ್ಪು–ತರಕಾರಿ, ಹಣ್ಣು, ಹಾಲು, ನುಗ್ಗೆಸೊಪ್ಪು ಸೇವಿಸುವುದರಿಂದ

ಎಲ್ಲ ಪೋಷಕಾಂಶಗಳು ಲಭಿಸುತ್ತವೆ. ವಿಶೇಷವಾಗಿ ಗರ್ಭಿಣಿಯರಿಗೆ ಕ್ಯಾಲ್ಸಿಯಂ ಅಧಿಕ ಪ್ರಮಾಣದಲ್ಲಿ ಅಗತ್ಯವಿರುತ್ತದೆ. ಗರ್ಭದಲ್ಲಿರುವ ಭ್ರೂಣಕ್ಕೆ ಚೆನ್ನಾಗಿ ಕ್ಯಾಲ್ಸಿಯಂ ಪೂರೈಕೆಯಾದಾಗ ಶಿಶುವಿನ ಮೂಳೆಗಳು ಶಕ್ತಿಯುತವಾಗುತ್ತವೆ ಎಂದು ಹೇಳಿದರು.

ಸಾರ್ವಜನಿಕ ಆಸ್ಪತ್ರೆಯ ಆರ್ಬಿಎಸ್‌ಕೆ ಅಪ್ತಾ ಸಮಾಲೋಚಕ ಓಬಣ್ಣ ಮಾತನಾಡಿದರು. ಅಂಗನವಾಡಿ ಕಾರ್ಯಕರ್ತೆ ಮಹಾಂತಮ್ಮ, ಆಶಾ ಕಾರ್ಯಕರ್ತೆಯರಾದ ಪದ್ಮಾ, ಎ.ಎಂ. ಸಾವಿತ್ರಿ, ಅಂಗನವಾಡಿ ಸಹಾಯಕಿ ಶಾರದಮ್ಮ ಹಾಗೂ ಗರ್ಭಿಣಿಯರು, ತಾಯಾಂದಿರು ಭಾಗಿಯಾಗಿದ್ದರು.

ವರದಿ ಹೆಚ್ಚು ವೀರಣ್ಣ.

## ಐದು ಗ್ಯಾರಂಟಿ ಯೋಜನೆ ಸಮರ್ಪಕವಾಗಿ ತಲುಪಲಿ ರಾಜ್ಯ ಗ್ಯಾಂರಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ವಿಜಯನಗರ ಜಿಲ್ಲಾಧ್ಯಕ್ಷರಾದ ಶ್ರೀ ಕುರಿ ಶಿವಮೂರ್ತಿ ಹೇಳಿಕೆ



● ವಾರ್ತಾಲೋಕ ವಾರ್ತೆ

**ಕೊಟ್ಟೂರು: ಅ16** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ರಾಜ್ಯ ಗ್ಯಾಂರಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ವಿಜಯನಗರ ಜಿಲ್ಲಾಧ್ಯಕ್ಷರಾದ ಶ್ರೀ ಕುರಿ ಶಿವಮೂರ್ತಿ ಅವರು ಹೇಳಿದರು.

ಕೊಟ್ಟೂರು ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ತಮ್ಮ ಅಧ್ಯಕ್ಷತೆಯಲ್ಲಿ ನಡೆದ ತಾಲೂಕು ಮಟ್ಟದ ಐದು ಗ್ಯಾಂರಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು.

ಅನ್ನಭಾಗ್ಯ, ಗಹಲಕ್ಷ್ಮೀ, ಮಹಿಳೆಯರ ಸ್ತ್ರೀ ಶಕ್ತಿ ಯೋಜನೆ ಬಸ್ ಪ್ರಯಾಣ ಸೇರಿದಂತೆ ಐದು ಗ್ಯಾರಂಟಿ ಯೋಜನೆಗಳು ಶೇ.100% ಪ್ರಗತಿ ಸಾಧಿಸಬೇಕು. ಈ ನಿಟ್ಟಿನಲ್ಲಿ ಜನಪ್ರತಿನಿಧಿಗಳು, ಅಧಿಕಾರಿ ವರ್ಗದವರು ಶ್ರಮವಹಿಸುವುದು ಅಗತ್ಯವಾಗಿದೆ ಎಂದರು.

ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದಂತೆ ಪ್ರತಿ ತಿಂಗಳು ಎರಡು ಸಭೆಗಳನ್ನು ನಡೆಸಿ ಮಾಹಿತಿ ನೀಡುವಂತೆ ಅಧಿಕಾರಿಗಳಿಗ ಸೂಚಿಸಿದರು.

ಯೋಜನೆ ಜಾರಿಯಾದಾಗಿಬಿಂದ ಇಲ್ಲಿಯ ವರೆಗಿನ ಪ್ರಗತಿಯ ಸಮಗ್ರ ವರದಿಯನ್ನು ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ ಅವರು ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಿಸಲು ಕ್ರಮವಹಿಸಬೇಕು ಎಂದು ತಿಳಿಸಿದರು.

ತಾಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಬಿ.ಆನಂದಕುಮಾರ್, ಸಹಾಯಕ ನಿರ್ದೇಶಕರು (ಗ್ರಾ.ಉ) ಶ್ರೀ ಎಚ್.ವಿಜಯಕುಮಾರ್,

ಗ್ಯಾಂರಟಿ ಯೋಜನೆಗಳ ಜಿಲ್ಲಾ ಉಪಾಧ್ಯಕ್ಷರಾದ ಸೊನ್ನದ ಗುರಬಸವರಾಜ, ಸಮಿತಿಯ ಸದಸ್ಯರಾದ, ಪರಶುರಾಮ, ಬಸವರಾಜ ಗೌಡರ, ಜೀಲಾನ ಅವರು, ಐದು ಗ್ಯಾಂರಟಿ ಯೋಜನೆಗಳ ತಾಲ್ಲೂಕು ಸಂಬಂಧಪಟ್ಟ ಅಧಿಕಾರಿಗಳು, ತಾಪಂ ವ್ಯವಸ್ಥಾಪಕರಾದ ಶ್ರೀಮತಿ ಪುಷ್ಪಲತಾ ಅವರು ಪಾಲ್ಗೊಂಡಿದ್ದರು. ವರದಿ ಪರಶುರಾಮ್.

# ಉತ್ತರ ಕರ್ನಾಟಕ ನಿರ್ಲಕ್ಷಿಸಿದ ರಾಜ್ಯ ಸರ್ಕಾರ: ಬಿ.ವೈ.ವಿಜಯೇಂದ್ರ



**ಬೆಳಗಾವಿ:** 'ರಾಜ್ಯ ಸರ್ಕಾರ ಉತ್ತರ ಕರ್ನಾಟಕವನ್ನು ಸಂಪೂರ್ಣ ಕಡೆಗಣಿಸಿದೆ. ಎಲ್ಲ ಸಚಿವರೂ ಬೆಂಗಳೂ–ರಿಗೆ ಮಾತ್ರ ಸೀಮಿತವಾಗಿದ್ದಾರೆ. ಈ ಸರ್ಕಾರ ಕಾಮಗಾರಿಗಳ ಭೂಮಿಪೂಜೆ ಮಾಡಿದ್ದನ್ನೇ ನಾನು ನೋಡಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಗುದ್ದಲಿಯ ಮುಖವನ್ನೇ ನೋಡಿಲ್ಲ' ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಟೀಕಿಸಿದರು.

'ಸಚಿವರು ಯಾರೂ ಜಿಲ್ಲೆಗಳ ಪ್ರವಾಸ ಮಾಡುತ್ತಿಲ್ಲ. ಆರಂಭದಿಂದಲೂ ಈ ಸರ್ಕಾರ ಕೋಮಾ ಸ್ಥಿತಿಯಲ್ಲೇ ಇದೆ' ಎಂದು ಅವರು ನಗರದಲ್ಲಿ ಗುರುವಾರ ಮಾಧ್ಯಮದವರಿಗೆ ಪ್ರತಿಕ್ರಿಯಿಸಿದರು.

'ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆ ನನ್ನ ವಿರುದ್ಧ ಗಂಟೆಗಟ್ಟಲೇ ಮಾತನಾಡುತ್ತಾರೆ. ಆದರೆ, ಬೆಂಗಳೂರಿನಲ್ಲಿ ಪ್ರತಿಭಟನೆ ನಡೆಸುತ್ತಿರುವ ಗ್ರಾಮ ಪಂಚಾಯಿತಿ ನೌಕರರನ್ನು ಭೇಟಿ ಮಾಡಲು ಅವರ ಬಳಿ ಸಮಯವಿಲ್ಲ' ಎಂದು ಕುಟುಕಿದರು.

'ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಹಗರಣ ನಡೆದಿದೆ ಎಂದು ಸ್ವತಃ ಮುಖ್ಯಮಂತ್ರಿಗಳೇ ಒಪ್ಪಿಕೊಂಡಿದ್ದಾರೆ. ಮುಡಾ ಹಗರಣದ ಬಗ್ಗೆ ಚರ್ಚಿಸಿದರೆ ಮುಜುಗರವಾಗುತ್ತದೆ ಎಂದು ಅವರು ಪಲಾಯನವಾದ ಮಾಡಿದರು. ಈಗ ಮುಡಾ ಹಗರಣದಲ್ಲೂ ತಪ್ಪೊಪ್ಪಿಕೊಂಡು 14 ನಿವೇಶನಗಳನ್ನು ಹಿಂದಿರುಗಿಸಿದ್ದಾರೆ. ಅಸಹಾಯಕರಾಗಿ ಕಾಣಿಸುತ್ತಿರುವ ಅವರು, ಆತ್ಮವಿಶ್ವಾಸ ಕಳೆದುಕೊಂಡಿದ್ದಾರೆ' ಎಂದರು.

'ರಾಜ್ಯದಲ್ಲಿ ನಾಲ್ಕು ತಿಂಗಳಿನಿಂದ ಜನರ ಪರವಾಗಿರುವ ಸರ್ಕಾರ ಇಲ್ಲ ಎಂಬಂಥ ವಾತಾವರಣ ನಿರ್ಮಾಣವಾಗಿದೆ. ಲೋಕಸಭೆ ಚುನಾವಣೆ ವೇಳೆ, ಗ್ಯಾರಂಟಿಗಳ ಬಗ್ಗೆ ಉದ್ದುದ್ದ ಭಾಷಣ ಮಾಡಿ, ಗೃಹಲಕ್ಷ್ಮಿ ಯೋಜನೆಯಡಿ ಮೂರು ಕಂತಿನ ಹಣ ಕೊಟ್ಟರು. ಈಗ ಎಲ್ಲವನ್ನೂ ಮರೆತಿದ್ದಾರೆ' ಎಂದು ಟೀಕಿಸಿದರು.

ಸಚಿವ ಸತೀಶ ಜಾರಕಿಹೊಳಿ ಭೇಟಿಯಾದ ಕುರಿತು ಪ್ರತಿಕ್ರಿಯಿಸಿದ ವಿಜಯೇಂದ್ರ, 'ಕ್ಷೇತ್ರದ ಅಭಿವೃದ್ಧಿ ವಿಚಾರವಾಗಿ ನಾನು ಭೇಟಿಯಾಗಿದ್ದೆ. ಇದರಲ್ಲಿ ರಾಜಕಾರಣ ಹುಡುಕುವ ಅವಶ್ಯಕತೆ ಇಲ್ಲ. ನಮ್ಮ ಪಕ್ಷದೊಂದಿಗೆ ಎಲ್ಲ ಪಕ್ಷಗಳ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗುವುದು ಒಳ್ಳೆಯದು' ಎಂದರು.

ರಾಜ್ಯಸಭೆ ಸದಸ್ಯ ಈರಣ್ಣ ಕಡಾಡಿ, ಶಾಸಕರಾದ ಬಾಲಚಂದ್ರ ಜಾರಕಿಹೊಳಿ, ಧುರ್ಯೋದನ ಐಹೊಳೆ, ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ಅನಿಲ ಬೆನಕೆ, ಜಿಲ್ಲಾ ಘಟಕದ ಅಧ್ಯಕ್ಷ ಸುಭಾಷ ಪಾಟೀಲ, ನಗರದ ಘಟಕದ ಅಧ್ಯಕ್ಷೆ ಗೀತಾ ಸುತಾರ, ಮಾಜಿ ಶಾಸಕರಾದ ಡಾ.ವಿಶ್ವನಾಥ ಪಾಟೀಲ, ಮಹೇಶ ಕುಮಠಳ್ಳಿ, ವಿಧಾನ ಪರಿಷತ್ ಮಾಜಿ ಸದಸ್ಯರಾದ ಮಹಾಂತೇಶ ಕವಟಗಿಮಠ, ಅರುಣ ಶಹಾಪುರ ಇತರರು ಇದ್ದರು.

# ರಸ್ತೆ ಅಭಿವೃದ್ಧಿ ಮಾಡಿಸಿ




**ಕೊಪ್ಪಳ:** ಗಿಣಿಗೇರಾ&ಗಬ್ಬೂರು&ಕೂಕನಪಳ್ಳಿ ರಸ್ತೆ ಅಭಿವೃದ್ಧಿ, ಆಸ್ಪತ್ರೆ ಉನ್ನತಿಕರಣ ಸೇರಿ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಗಿಣಿಗೇರಾ ನಾಗರಿಕ ಹೋರಾಟ ಸಮಿತಿ, ಎಸ್?ಯುಸಿಐಸಿ ನೇತೃತ್ವದಲ್ಲಿ ಸಾರ್ವಜನಿಕರು ಗಿಣಿಗೇರಾ ಗ್ರಾಮದಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು.

ಎಸ್?ಯುಸಿಐಸಿ ಮುಖಂಡ ಶರಣು ಗಡ್ಡಿ ಮಾತನಾಡಿ, ಗ್ರಾಮದಲ್ಲಿ ಜನವಸತಿ ದಿನ ಕಳೆದಂತೆ ಹೆಚ್ಚುತ್ತಿದೆ. ವಲಸೆ ಕಾರ್ಮಿಕರ ಬೀಡಾಗುತ್ತಿದೆ. ಕಾರ್ಖಾನೆಗಳು ಹೆಚ್ಚಾಗಿದ್ದು ಧೂಳು ಗ್ರಾಮದಲ್ಲಿ ಆವರಿಸುತ್ತಿದೆ. ಜನರ ಆರೋಗ್ಯ ಹಾಳಾಗುತ್ತಿದೆ. ಗಿಣಿಗೇರಾ&ಗಬ್ಬೂರು&ಕೂಕನಪಳ್ಳಿ ರಸ್ತೆ ಸಂಪೂರ್ಣ ಹಾಳಾಗಿದೆ. ಇತರ ರಸ್ತೆಗಳು ಅಷ್ಟಕ್ಕಷ್ಟೆ. ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಬೇಕು. ಅಗತ್ಯ ಸೌಲಭ್ಯ ಕಲ್ಪಿಸಬೇಕೆಂದು ಒತ್ತಾಯಿಸಿದರು.

ಮುಖಂಡ ಮಂಗಳೇಶ ರಾಠೋಡ ಮಾತನಾಡಿ, ರಸ್ತೆಗಳ ಬದಿ ಗಿಡ ನೆಟ್ಟಿಲ್ಲ. ಬೀದಿ ದೀಪಗಳಿಲ್ಲ. ಆಸ್ಪತ್ರೆ ಸೇರಿ ಗ್ರಾಮದಲ್ಲಿ ಮೂಲ ಸೌಕರ್ಯಗಳಿಲ್ಲ. ಗಂಗಾವತಿಯಿಂದ ಬರುವ ಬಸ್?ಗಳು ಬೈಪಾಸ್?ಗೆ ಹೋಗದೇ, ಗ್ರಾಮದಲ್ಲಿ ಹಾದು ಹೋಗುವಂತೆ ಕ್ರಮವಹಿಸಿ. ಕಾರ್ಖಾನೆಗಳಿದ್ದು, ಸಿಎಸ್?ಆರ್? ನಿಧಿಯಗಡಿ ಗ್ರಾಮ ಅಭಿವೃದ್ಧಿಪಡಿಸಬೇಕೆಂದು ಆಗ್ರಹಿಸಿದರು.

ಗ್ರಾಮಸ್ಥರಾದ ಮೌನೇಶ್?, ಸುರೇಶ ಕಲಾಲ್?, ದ್ಯಾಮಣ್ಣ ಡೊಳ್ಳಿನ,

ಹನುಮಂತ ಕಟಿಗಿ, ರಾಘವೇಂದ್ರ, ಮಲ್ಲಿಕಾರ್ಜುನ ಗೋಡೆಕಾರ್?, ವಿಷ್ಣು, ರವಿ, ಅನುರಾಧ, ಚಿಕ್ಕಪ್ಪ ಉಪ್ಪಾರ, ನರಸಪ್ಪ ಗುಳದಲ್ಲಿ, ಜಂಬಣ್ಣ ಉಪ್ಪಾರ ಇತರರಿದ್ದರು.

# ಬದುಕು ಹಸನಾಗಿಸಿದ ಹೈನುಗಾರಿಕೆ



**ಹುಬ್ಬಳ್ಳಿ:** ಸಮಗ್ರ ಕೃಷಿಯೊಂದಿಗೆ ಹೈನುಗಾರಿಕೆಗೆ ಒತ್ತು ಕೊಟ್ಟು ಬದುಕು ಹಸನಾಗಿಸಿಕೊಂಡವರು ಕಲಘಟಗಿ ತಾಲ್ಲೂಕಿನ ಬೆಲವಂತರ ಗ್ರಾಮದ ರೈತ ಬಸವಣೆಪ್ಪ ಅದರಗುಂಜಿ.

ತಮ್ಮ 11 ಎಕರೆ ಜಮೀನಿನಲ್ಲಿ 7 ಎಕರೆ ಕಬ್ಬು, ಒಂದೂವರೆ ಎಕರೆ ಹುಲ್ಲು, ಒಂದು ಎಕರೆ ಸೋಯಾಬಿನ್, ಅರ್ಧ ಎಕರೆ ಭತ್ತ ಹಾಗೂ ತರಕಾರಿಗಳನ್ನು ಬೆಳೆದಿದ್ದಾರೆ. ಜೊತೆಗೆ ಎಂಟೂವರೆ ಎಕರೆ ಜಾಗದಲ್ಲಿ ಹೈನುಗಾರಿಕೆ ಮಾಡಿಕೊಂಡಿದ್ದು, ಡೇರಿಯನ್ನು ಸ್ಥಾಪಿಸಿಕೊಂಡಿದ್ದಾರೆ.

ಮೂಲತಃ ಕೃಷಿ ಕುಟುಂಬದ, 73 ವರ್ಷದ ಬಸವಣೆಪ್ಪ ಅವರು ನೆಮ್ಮದಿಯುತ ಜೀವನಕ್ಕಾಗಿ ಕೃಷಿಯನ್ನೇ ಮುಂದುವರೆಸಿಕೊಂಡು ಬಂದಿದ್ದಾರೆ. ಎರಡು ಹಸುಗಳಿಂದ ಹೈನುಗಾರಿಕೆ ಆರಂಭಿಸಿದ ಇವರ ಬಳಿ ಇದೀಗ ಗೀರ್, ಎಚ್‌ಎಫ್, ಸಿಂಧಿ, ಹಳ್ಳಿಕಾರ, ಜರ್ಸಿ ತಳಿಯ ಅಂದಾಜು 35 ಹಸುಗಳಿವೆ.

ಮೇವು ಕತ್ತರಿಸಲು ಯಂತ್ರ ಇಟ್ಟುಕೊಂಡಿದ್ದಾರೆ. ಹಸುಗಳ ಸಗಣಿ ಮತ್ತು ಗಂಜಲು ಸುಲಭವಾಗಿ ಒಂದೆಡೆ ಸಂಗ್ರಹವಾಗುವಂತೆ ಗುಂಡಿಗಳ ವ್ಯವಸ್ಥೆಯನ್ನು ಮಾಡಿಕೊಂಡಿದ್ದು, ಅದೆಲ್ಲವನ್ನು ಜಮೀನಿಗೆ ಗೊಬ್ಬರವಾಗಿ ಬಳಸುತ್ತಾರೆ. ಕೃಷಿ ಇಲಾಖೆಯ ನೆರವಿನಿಂದ ಮೂರು ವರ್ಷಗಳ ಹಿಂದೆ 21 ಮೀಟರ್ ಉದ್ದ 21 ಮೀಟರ್ ಅಗಲ, 10 ಅಡಿ ಆಳದ ಕೃಷಿ ಹೊಂಡ ನಿರ್ಮಿಸಿಕೊಂಡಿದ್ದಾರೆ.

'ದಿನಕ್ಕೆ ಅಂದಾಜು 130ರಿಂದ 140 ಲೀಟರ್ ಹಾಲು ಉತ್ಪಾದನೆಯಾಗುತ್ತಿದ್ದು, ಕೆಎಂಎಫ್ (ಕರ್ನಾಟಕ ಹಾಲು ಉತ್ಪಾದಕರ ಒಕ್ಕೂಟ)ನಿಂದ ಲೀಟರ್‌ಗೆ ?30 ದರ ಸಿಗುತ್ತದೆ. ಹೈನುಗಾರಿಕೆಯಿಂದ ತಿಂಗಳಿಗೆ ಅಂದಾಜು ?50 ಸಾವಿರ ಲಾಭ ಪಡೆಯುತ್ತಿದ್ದೇವೆ' ಎಂದು ಬಸವಣೆಪ್ಪ ಅದರಗುಂಜಿ ಅವರು ಮಾಹಿತಿ ನೀಡಿದರು.

'ಹೈನುಗಾರಿಕೆಯಿಂದ ಜಮೀನುಗಳಿಗೆ ಹೆಚ್ಚು ಅನುಕೂಲವಾಗಿದ್ದು, 15ಘಿ4 ಅಳತೆಯ ಎರಡು ತೊಟ್ಟಿಗಳ ಮೂಲಕ ಎರೆಹುಳು ಗೊಬ್ಬರ ತಯಾರಿಸುತ್ತಿದ್ದು, ಬಯೋಗ್ಯಾಸ್ ನಿರ್ಮಿಸಿಕೊಂಡಿದ್ದೇವೆ. ವರ್ಷಕ್ಕೆ ಅಂದಾಜು 3 ಟನ್ ಗೊಬ್ಬರ ಉತ್ಪಾದಿಸಿ, ಕೃಷಿ ಕಾರ್ಯಕ್ಕೆ ಬಳಸುತ್ತಿದ್ದೇವೆ' ಎಂದು ತಿಳಿಸಿದರು.

'ಈಗಾಗಲೇ ಸಾಕಷ್ಟು ಮಳೆ ಸುರಿದಿದ್ದು, ಬಿಡುವು ಬಿಟ್ಟರೆ ಬೆಳೆಗಳು ಚೆನ್ನಾಗಿ ಬಂದು, ಇಳುವರಿ ಹೆಚ್ಚಲಿದೆ. ಉತ್ತಮ ಆದಾಯದ ನಿರೀಕ್ಷೆಯಲ್ಲಿದ್ದೇವೆ' ಎಂದರು.

# ಮಾಜಿ ಸಚಿವ ಗ್ರಾಮೀಣ ಶಾಸಕ ಬಿ ನಾಗೇಂದ್ರ ಇಂದು ಬಳ್ಳಾರಿಗೆ



● ವಾರ್ತಾಲೋಕ ವಾರ್ತೆ

**ಬಳ್ಳಾರಿ :ಅ 16.** ಮಹರ್ಷಿ ವಾಲ್ಮೀಕಿ ನಿಗಮದ ಅಕ್ರಮ ಹಣ ವರ್ಗಾವಣೆಯಲ್ಲಿ ಕಳೆದ ಹಲವು ದಿನಗಳಿಂದ ಜೈಲಿನಲ್ಲಿದ್ದ ಮಾಜಿ ಸಚಿವ ಹಾಲಿ ಬಳ್ಳಾರಿ ಗ್ರಾಮಾಂತರ ಶಾಸಕರಾದ ಬಿ ನಾಗೇಂದ್ರ ಅವರು ಜಾಮೀನಿನ ಮೇಲೆ ಬಿಡುಗಡೆಗೊಂಡು ಇಂದು ಬಳ್ಳಾರಿ ನಗರಕ್ಕೆ ಆಗಮಿಸಲಿದ್ದಾರೆ.

ಇಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಇರುವುದರಿಂದ ಬಳ್ಳಾರಿಗೆ ಆಗಮಿಸಿದ ಮೊದಲಿಗೆ ಅವರು ನಗರದ ನಗರದ ವಾಲ್ಮೀಕಿ ವೃತ್ತದಲ್ಲಿರುವ (SP CIRCLE) ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿಗೆ ಮಾಲಾರ್ಪಣೆಯನ್ನು ಮಾಡಿದ ನಂತರ ನಲ್ಲಚೇರವು ಪ್ರದೇಶದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ನಂತರ ಹಲವಾರು ದಿನಗಳಿಂದ ಅವರಿಗಾಗಿ ಕಾಯುತ್ತಿರುವ ನಾಗೇಂದ್ರ ಅವರ ಅಭಿಮಾನಿಗಳು ಮತ್ತು ಗ್ರಾಮಾಂತರ ಪ್ರದೇಶದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರನ್ನು ನೆಹರು ಕಾಲೋನಿಯ ತಮ್ಮ ನಿವಾಸದಲ್ಲಿ ಭೇಟಿಯಾಗಲಿದ್ದಾರೆ ಎಂದು ಕಾಂಗ್ರೆಸ್ ಪಕ್ಷದ ಮೂಲಗಳಿಂದ ತಿಳಿದು ಬಂದಿದೆ.

# ಬೆಳಗಾವಿ ಬಿತ್ತನೆ ಬೀಜ: ದರದಲ್ಲಿ ಏರಿಳಿತ



**ಬೆಳಗಾವಿ:** ಹಿಂಗಾರು ಹಂಗಾಮಿನ ಬಿತ್ತನೆ ಬೀಜಗಳಾದ ರಾಗಿ, ಗೋಧಿ ಮತ್ತು ಕಡಲೆ ದರ ತುಸು ಹೆಚ್ಚಾಗಿದೆ. ಜೋಳ, ಶೇಂಗಾ ಮತ್ತು ಕುಸುಬೆ ಬೀಜಗಳ ದರ ಕಡಿಮೆಯಾಗಿದೆ. ಉತ್ತರ ಕರ್ನಾಟಕ ಭಾಗದ ರೈತರಿಗೆ ತುಸು ಅನುಕೂಲವಾಗಿದ್ದರೆ, ದಕ್ಷಿಣ ಕರ್ನಾಟಕ ಭಾಗದವರಿಗೆ ದರದ ಬಿಸಿ ತಟ್ಟಿದೆ.

ಕಳೆದ ವರ್ಷ ರಾಜ್ಯದ ಎಲ್ಲೆಡೆ ಬರಗಾಲ ಆವರಿಸಿದ್ದರಿಂದ ಬಿತ್ತನೆ ಬೀಜಗಳ ಕೊರತೆ ಉಂಟಾಗಿದೆ.

ಕರ್ನಾಟಕ ರಾಜ್ಯ ಬೀಜ ನಿಗಮ, ರಾಷ್ಟ್ರೀಯ ಬೀಜ ನಿಗಮ ಹಾಗೂ ಕರ್ನಾಟಕ ರಾಜ್ಯ ಎಣ್ಣೆಬೀಜ ಬೆಳೆಗಾರರ ಮಹಾಮಂಡಳಿಯಿಂದ ಬಿತ್ತನೆ ಬೀಜಗಳನ್ನು ಬಿತ್ತಲು ರೈತರಿಗೆ ನೀಡಲಾಗಿತ್ತು. ಈಗ ರೈತರಿಂದ ಖರೀದಿಸಲಾಗಿದೆ.

'ನಿಗಮ? ಮಂಡಳಿಗಳು ಕೂಡ ರೈತರಿಂದ ಶೇ 23ರಷ್ಟು ಹೆಚ್ಚು ದರ ನೀಡಿ ಖರೀದಿಸಿವೆ. ಅಂಥ ಬೀಜಗಳಿಗೆ ಶೇ 9 ರಿಂದ ಶೇ 13ರಷ್ಟು ದರ ಹೆಚ್ಚಾಗಿದೆ. ರೈತ–ರಿಗೆ ಹೆಚ್ಚು ಲಾಭವಾಗಿದೆ' ಎಂದು ಕೃಷಿ ಇಲಾಖೆ ಅಧಿಕಾ–ರಿಗಳು ತಿಳಿಸಿದ್ದಾರೆ.

ಹಿಂಗಾರು ಮಳೆ ಕೂಡ ಉತ್ತಮವಾಗಿ ಸುರಿದಿದ್ದರಿಂದ ರೈತರು ಹೊಲಗಳನ್ನು ಹದ ಮಾಡುವಲ್ಲಿ ನಿರತರಾಗಿದ್ದಾರೆ. ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ನೀಡಲು ಕೃಷಿ ಇಲಾಖೆ ಸಿದ್ಧತೆ ನಡೆಸಿದೆ.

'ಕಡಲೆ ಹಾಗೂ ಗೋಧಿ ಬಿತ್ತನೆ ಬೀಜಗಳು ದುಬಾರಿಯಾಗಿವೆ. ಅತಿವೃಷ್ಟಿಯ ಕಾರಣ ನಮ್ಮ ಸೋಯಾಬಿನ್ ಬೆಳೆ ಹಾಳಾಗಿದೆ. ಇದರ ಮಧ್ಯೆಯೇ ಬೀಜಗಳ ದರ ಏರಿಕೆ ಸಂಕಷ್ಟ ತಂದಿದೆ' ಎಂದು ಸವದತ್ತಿ ತಾಲ್ಲೂಕಿನ ಚಿಕ್ಕುಂಬಿ ಗ್ರಾಮದ ರೈತ ಮೊಹಮ್ಮದ್ ಅಲಿ ದೊಡ್ಡಮನಿ ತಿಳಿಸಿದರು.

# ಕಟ್ಟುಕತೆಗಳಾಚೆಯ 'ಮಹರ್ಷಿ ವಾಲ್ಮೀಕಿ

# ವಿಶೇಷ ಲೇಖನ ಲೇಖಕ ಅರುಣ್ ಜೋಳದಕೂಡ್ಲಿಗಿ ಇವರಿಂದ

● ವಾರ್ತಾಲೋಕ ವಾರ್ತೆ

**ಬಳ್ಳಾರಿ :ಅ16.** ಕರ್ನಾಟಕದಲ್ಲಿ ಆಚರಿಸಲ್ಪಡುವ ವಾಲ್ಮೀಕಿ ಜಯಂತಿಗಳಲ್ಲಿ ಮಹರ್ಷಿ ವಾಲ್ಮೀಕಿಯ ಬಗೆಗೆ ಕಡ್ಡಾಯವಾಗಿ ಉಲ್ಲೇಖಿಸುವ ಕಟ್ಟುಕತೆಯೊಂದಿದೆ. ಅದೆಂದರೆ ವಾಲ್ಮೀಕಿ ಪೂರ್ವಾಶ್ರಮದಲ್ಲಿ ರತ್ನಾಕರ ಎಂಬ ದರೋಡೆಕೋರನಾಗಿದ್ದ. ನಾರದರು ಒಮ್ಮೆ ಎದುರಾಗಿ ನಿನ್ನ ಈ ಅಪರಾದದಲ್ಲಿ ಮನೆಯವರು ಪಾಲುದಾರರೇ? ಎನ್ನುತ್ತಾನೆ, ವಿಚಾರಿಸಲಾಗಿ ರತ್ನಾಕರನ ಕುಟುಂಬ ಆತನ ಅಪರಾಧದಲ್ಲಿ ಪಾಲು ಪಡೆಯಲು ನಿರಾಕರಿಸುತ್ತಾರೆ. ನಂತರ ಆತನಿಗೆ ಅರಿವಾಗಿ ದರೋಡೆಯನ್ನು ನಿಲ್ಲಿಸಿ ತಪಸ್ಸು ಮಾಡುತ್ತಾನೆ. ಬಹುದಿನಗಳ ನಂತರ ಜ್ಞಾನೋದಯವಾಗಿ ತಪಸ್ಸಿಗೆ ಕೂತಲ್ಲಿಯೇ ಬೆಳೆದಿದ್ದ ಹುತ್ತವನ್ನು ಹೊಡೆದು ವಾಲ್ಮೀಕಿಯಾಗಿ ಹೊರಬಂದು ನಾರದರ ನಿರ್ದೇಶನದಂತೆ ರಾಮಾಯಣ ರಚನೆ ಮಾಡಿದ ಎನ್ನುವ ಕತೆ ಹೇಳುತ್ತಾರೆ. ಇದನ್ನು ವಿಶ್ವವಿದ್ಯಾಲಯಗಳ ಅಧ್ಯಾಪಕರಿಂದ ಹಿಡಿದು, ರಾಜಕಾರಣಿ, ಸಾಮಾನ್ಯ ಜನರ ತನಕ ಈ ಕತೆಯನ್ನು ಹೇಳುತ್ತಲೇ ಬಂದಿದ್ದಾರೆ. ಹಾಗಾದರೆ ವಾಲ್ಮೀಕಿ ದರೋಡೆಕೋರನಾಗಿದ್ದ ಎನ್ನುವುದಕ್ಕೆ ಪುರಾವೆ ಏನು?

ಒಂದೋ ಸ್ವತಃ ವಾಲ್ಮೀಕಿ ತಾನೇ ಬರೆದ ರಾಮಾಯಣದಲ್ಲಿ ದರೋಡೆಕೋರನಾಗಿರುವ ಬಗ್ಗೆ ಹೇಳಿಕೊಂಡಿರಬೇಕು. ಇಲ್ಲವೇ ವಾಲ್ಮೀಕಿಯ ಜತೆ ಬದುಕಿದ್ದ ಸಮಕಾಲೀನರು ಈತನ ಬದುಕನ್ನು ನೋಡಿ ಉಲ್ಲೇಖಿಸಿರಬೇಕು. ಸದ್ಯಕ್ಕೆ ಈ ಎರಡೂ ಪುರಾವೆಗಳು ಇಲ್ಲ. ಹಾಗಾದರೆ ವಾಲ್ಮೀಕಿ ದರೋಡೆಕೋರನಾಗಿದ್ದ ಎನ್ನುವ ಕಥೆ ಹುಟ್ಟಿದ್ದೆಲ್ಲಿ? ಚಾರಿತ್ರಿಕ ಅಧ್ಯಯನಗಳ ಕಡೆ ಹೊರಳೋಣ. ವಾಲ್ಮೀಕಿ ಮತ್ತು ರಾಮಾಯಣ ರಚನೆ ಕುರಿತಂತೆ ವ್ಯಾಪಕವಾದ ಅಧ್ಯಯನಗಳು ನಡೆದಿವೆ. ಇತಿಹಾಸ ತಜ್ಞ ಹೆಚ್.ಡಿ. ಸಾಂಕಾಲಿಯ ಉಲ್ಲೇಖಿಸುವಂತೆ, ಈ ಅಧ್ಯಯನ 1843 ರಿಂದ 1867 ರ ಅವಧಿಯಲ್ಲಿ ಗೊರೆಸ್ಯೋನ ಪ್ರಕಟಿಸಿದ ರಾಮಾಯಣದ ಆರು ಸಂಪುಟಗಳಿಂದ ಆರಂಭವಾಗಿದೆ. ಕಾಲನಿರ್ಣಯದ ಬಗ್ಗೆ ಎ.ವೆಬರ್ (1873) ಮೊದಲು ವಿಮರ್ಶೆ ಮಾಡಿರಬೇಕೆಂದು ಅಭಿಪ್ರಾಯ ತಾಳುತ್ತಾರೆ. ವಿಲಿಯಂ ಜೋನ್ಸ್, ರಾಮಸ್ವಾಮಿಶಾಸ್ತ್ರಿ, ಆರ್.ಸಿ.ಮುಜುಂದಾರ್, ಗೊರೇಸಿಯಾ, ಪುಲಸ್ಕರ್, ಪಿ.ವಿ ಕಾಣೆ, ಡಿ.ಡಿ.ಕೋಸಾಂಬಿ, ಎ.ಎಲ್.ಬಾಷಂ, ರೋಮಿಲಾ ಥಾಪರ್, ಇರ್ಫಾನ್ ಹಬೀಬ್, ಪೆರಿಯಾರ್, ಲೋಹಿಯಾ, ಅಂಬೇಡ್ಕರ್ ತನಕ ಹೀಗೆ ನೂರಾರು ಜನ ಇತಿಹಾಸ ತಜ್ಞರು, ಪುರಾತತ್ವಜ್ಞರು, ಹಲವು ಜ್ಞಾನಶಾಖೆಗಳ ಹಿನ್ನೆಲೆಯಲ್ಲಿ ಅಧ್ಯಯನ ಮಾಡಿದ್ದಾರೆ.

ವಾಲ್ಮೀಕಿ ರಾಮಾಯಣದ ರಚನೆಯ ಕಾಲ ನಿರ್ಣಯದ ಬಗ್ಗೆ ಭಿನ್ನಾಭಿಪ್ರಾಯಗಳಿದ್ದರೂ, ಕ್ರಿ.ಪೂ. 3 ರಿಂದ 5 ನೇ ಶತಮಾನದ ಅಂತರದಲ್ಲಿ ವಾಲ್ಮೀಕಿ ಬದುಕಿದ್ದಿರಬೇಕು, ರಾಮಾಯಣ ರಚನೆಯಾಗಿದ್ದಿರಬೇಕು ಎಂಬ ನಿಲುವಿಗೆ ಹೆಚ್ಚು ಮಾನ್ಯತೆ ದೊರೆತಿದೆ. ಹೀಗೆ ವಾಲ್ಮೀಕಿ ಬದುಕಿದ್ದ ಕಾಲಘಟ್ಟವೇ ಮಸುಕಾಗಿರುವಾಗ ವಾಲ್ಮೀಕಿ ದರೋಡೆಕೋರನಾಗಿದ್ದನ್ನು ನೋಡಿದವರು ಯಾರು? ಮೇಲೆ ಉಲ್ಲೇಖಿಸಿದ ಅಧ್ಯಯನಗಳೂ ಸಹ ರಾಮಾಯಣದ ಕಣ್ಣೋಟದಲ್ಲಿ ವಾಲ್ಮೀಕಿಯ ಜೀವನ ವೃತ್ತಾಂತವನ್ನು ವಿವರಿಸಿದ್ದು ಬಿಟ್ಟರೆ, ಇತರೆ ಜೀವನ ವಿವರಗಳನ್ನು ದಾಖಲಿಸುವುದಿಲ್ಲ. ಹಾಗಾದರೆ ವಾಲ್ಮೀಕಿ ದರೋಡೆಕೋರನಾಗಿದ್ದ ಎನ್ನುವುದರ ನೆಲೆಗಟ್ಟೇನು? ಎನ್ನುವ ಪ್ರಶ್ನೆ ಎದುರು ನಿಲ್ಲುತ್ತದೆ.

ಕರ್ನಾಟಕದಲ್ಲಿ ಈ ತನಕ ವಾಲ್ಮೀಕಿ ದರೋಡೆಕೋರನಾಗಿದ್ದನು ಎನ್ನುವ ಕಟ್ಟುಕತೆಯನ್ನು ಬಹಿರಂಗವಾಗಿ ಪ್ರಶ್ನಿಸಿದ್ದಕ್ಕಿಂತ ಒಪ್ಪಿಕೊಂಡಿರುವುದೇ ಹೆಚ್ಚು. ಆದರೆ ಉತ್ತರ ಭಾರತದ ಪಂಜಾಬ್ ಒಳಗೊಂಡಂತೆ ಅಲ್ಲಿನ ವಾಲ್ಮೀಕಿ ಸಮುದಾಯದವರು ವಾಲ್ಮೀಕಿ ದರೋಡೆಕೋರನಾಗಿದ್ದ ಎನ್ನುವ ಉಲ್ಲೇಖ ಮತ್ತು ಕಟ್ಟುಕತೆಗಳ ವಿರುದ್ಧ ಬಂಡೆದ್ದಿದ್ದಾರೆ. ಉಲ್ಲೇಖಿಸಿದವರ ವಿರುದ್ಧ ಎಫ್.ಐ.ಆರ್ ದಾಖಲಿಸಿದ್ದಾರೆ. ಕೋರ್ಟಿನ ಕಟಕಟೆಗೆ ಎಳೆತಂದು ಸಾಕ್ಷಿ ಕೇಳಿದ್ದಾರೆ. 2003 ರಲ್ಲಿ ಪ್ರಸಾರವಾಗಿದ್ದ 'ಕುಮ್ ಕುಮ್ ಏಕ್ ಪ್ಯಾರ್ ಬಂಧನ್' ಎನ್ನುವ ಧಾರವಾಹಿಯಲ್ಲಿ ಮಹರ್ಷಿ ವಾಲ್ಮೀಕಿಯನ್ನು 'ಡಾಕು' ಎಂದು ಪದ ಬಳಸಿ ಪರಿಚಯಿಸಲಾಗಿತ್ತು. ಇದರ ವಿರುದ್ಧ ಎಫ್.ಐ.ಆರ್ ದಾಖಲಾಗಿತ್ತು. ಬ್ಯಾಗ್ ಫಿಲ್ಮ್ ಲಿಮಿಟೆಡ್ ನವರು ಪಂಜಾಬಿನ ವಾಲ್ಮೀಕಿ ಸಮುದಾಯವನ್ನು ಕ್ಷಮೆಕೋರಿದ್ದರು. ಟಿ.ವಿ ಮೂಲಕವೇ ಬಹಿರಂಗ ಕ್ಷಮೆಯಾಚಿಸಿ, ಸ್ಪಷ್ಟನೆಯ ಕಾರ್ಯಕ್ರಮ ಪ್ರಸಾರ ಮಾಡಿ ಕೇಸನ್ನು ವಾಪಾಸು ಪಡೆಯುವಂತೆ ಮನವಿ ಮಾಡಿದ್ದರು. ಇನ್ನು 2009 ರ 'ಸ್ಟಾರ್ ಇಂಡಿಯಾ ಪ್ರವೇಟ್ ಲಿಮಿಟೆಡ್ ವರ್ಸಸ್ ಸ್ಟೇಟ್ ಆಫ್ ಪಂಜಾಬ್' ಕೇಸಿನಲ್ಲಿ ವಾಲ್ಮೀಕಿ ದರೋಡೆಕೋರನಾಗಿರಲಿಲ್ಲ ಎನ್ನುವ ಜಸ್ಟೀಸ್ ರಾಜೀವ ಭಲ್ಲಾ ಅವರ ತೀರ್ಪಿನೊಂದಿಗೆ ತಾರ್ಕಿಕ ಅಂತ್ಯ ಕಂಡಿತು.


ಪಂಜಾಬ್‌ನ ಜಲಂಧರ್ ಜಿಲ್ಲೆಯ ಮಾಡೆಲ್ ಟೌನ್‌ನ ರಿಷಿನಗರದ ನಿವಾಸಿ ನವ್ವಿಕಾಸ್ ಎನ್ನುವವರು 6.10.2009 ರಲ್ಲಿ ಸ್ಟಾರ್ ಪ್ಲಸ್ ಟಿವಿಯಲ್ಲಿ 'ಸಪ್ನ ಬಾಬುಲ್ ಕಾ ಬಿದಾಯಿ' ಎನ್ನುವ ದಾರವಾಹಿ ನೋಡುತ್ತಿದ್ದರು. ಆ ದಾರವಾಹಿಯಲ್ಲಿ ವಾಲ್ಮೀಕಿಯ ಋಷಿಪೂರ್ವ ಜೀವನದಲ್ಲಿ ದರೋಡೆಕೋರನಾಗಿದ್ದ, ರೋಡ್ ರಾಬರ್ ಆಗಿದ್ದ ಎನ್ನುವ ಸಂಭಾಷಣೆ ಬರುತ್ತದೆ. ಸ್ವತಃ ವಾಲ್ಮೀಕಿ ಸಮುದಾಯದ ನವ್ವಿಕಾಸ್ ಅವರು ಈ ಸಂಭಾಷಣೆ ಮತ್ತು ದಾರವಾಹಿಯ ವಿರುದ್ಧ ಎಫ್.ಐ.ಆರ್ ದಾಖಲಿಸುತ್ತಾರೆ. ಈ ಕಟ್ಟುಕಥೆಗೆ ದಾಖಲೆ ಕೊಡಿ ಎಂದು ಕೇಳುತ್ತಾರೆ. ಸ್ಥಳೀಯ ಪೋಲೀಸರಿಂದ ನಿರೀಕ್ಷಿತ ಬೆಂಬಲ ಸಿಗದ ಕಾರಣ ನವ್ವಿಕಾಸ್ ಕೋರ್ಟ್ ಮೆಟ್ಟಿಲೇರುತ್ತಾರೆ.

ಪಂಜಾಬ್ ಯುನಿವರ್ಸಿಟಿ ಪಾಟಿಯಾಲದ ಪ್ರೊಫೆಸರ್ ಮಂಜುಳಾ ಸಹದೇವ್ ಅವರ ವಾಲ್ಮೀಕಿ ಜೀವನ ವೃತ್ತಾಂತವನ್ನು ಕುರಿತ ಸಂಶೋಧನೆಯನ್ನು ಕೋರ್ಟ್ ಪರಿಶೀಲಿಸುತ್ತದೆ. ಮಂಜುಳ ಸಹದೇವ್ 1979 ರಿಂದ ಪಂಜಾಬ್ ಯುನಿವರ್ಸಿಟಿಯಲ್ಲಿ ಸಂಸ್ಕೃತ ವಿಭಾಗದಲ್ಲಿ ಪ್ರಾಧ್ಯಾಪಕರಾಗಿ ಕೆಲಸ ಮಾಡಿ ನಿವೃತ್ತರಾಗಿದ್ದಾರೆ. 1995–2004 ರ ತನಕ ಮಹರ್ಷಿ ವಾಲ್ಮೀಕಿ ಚೇರ್ ಮುಖ್ಯಸ್ಥರಾಗಿದ್ದರು. ಸಂಸ್ಕೃತ ಶಾಸ್ತ್ರೀಯ ಭಾಷೆಯ ಖಾಯಂ ಸದಸ್ಯರೂ ಆಗಿದ್ದಂತವರು. ಎಂಬತ್ತರ ದಶಕದಿಂದಲೂ ವಿಶೇಷವಾಗಿ ರಾಮಾಯಣ ಮತ್ತು ವಾಲ್ಮೀಕಿ ಕುರಿತು ನಿರಂತರ ಅಧ್ಯಯನ ಸಂಶೋಧನೆಗಳನ್ನು ಪ್ರಕಟಿಸಿದವರು. 'ಮಹರ್ಷಿ ವಾಲ್ಮೀಕಿ ಏಕ್ ಸಮೀಕ್ಷಾತ್ಮಕ ಅಧ್ಯಯನ' ಇವರ ಮಹತ್ವದ ಸಂಶೋಧನೆ. ಈ ಕೃತಿಯಲ್ಲಿ ಮಹರ್ಷಿ ವಾಲ್ಮೀಕಿ ಋಷಿಪೂರ್ವದಲ್ಲಿ ಡಕಾಯಿತ್, ರೋಡ್ ರಾಬರ್ ಆಗಿರಲಿಲ್ಲ ಎನ್ನುವುದರ ತಾರ್ಕಿಕ ವಿಶ್ಲೇಷಣೆ ಮಾಡಿದ್ದಾರೆ.

ಈ ಸಂಶೋಧನೆಯ ಮುಖ್ಯಾಂಶಗಳೆಂದರೆ, ವೇದಗಳ ಕಾಲದಿಂದ ಕ್ರಿ.ಶ 9 ನೇ ಶತಮಾನದ ತನಕ ವಾಲ್ಮೀಕಿ ಪೂರ್ವಾಶ್ರಮದಲ್ಲಿ ದರೋಡೆಕೋರನಾಗಿದ್ದ ಎನ್ನುವುದಕ್ಕೆ ಎಲ್ಲಿಯೂ ಉಲ್ಲೇಖಗಳಿಲ್ಲ. ಅಂತೆಯೇ ವಾಲ್ಮೀಕಿ ಅಂದರೆ ಹುತ್ತದಿಂದ ಎದ್ದು ಬಂದವ ಎನ್ನುವ ಪವಾಡ ಸದೃಶ್ಯ ಕಥನದ ಬಳಕೆಯೂ ಇಲ್ಲ. ವಾಲ್ಮೀಕಿ ಸ್ವರಚಿತ ರಾಮಾಯಣದಲ್ಲಿಯೇ ಎಲ್ಲಿಯೂ ತಾನು ಪೂರ್ವಾಶ್ರಮದಲ್ಲಿ ದರೋಡೆಕೋರನಾಗಿದ್ದ ಬಗ್ಗೆ ಪ್ರಸ್ತಾಪಿಸುವುದಿಲ್ಲ. ಬದಲಾಗಿ ತನ್ನನ್ನು ಭಗವಾನ್, ಮುನಿ, ರಿಷಿ, ಮಹರ್ಷಿ ಎಂದು ಕರೆದುಕೊಂಡದ್ದಕ್ಕೆ ಸಾಕ್ಷ್ಯಗಳಿವೆ. ಮೊಟ್ಟಮೊದಲ ಬಾರಿಗೆ ವಾಲ್ಮೀಕಿ ಋಷಿಪೂರ್ವದಲ್ಲಿ ದರೋಡೆಕೋರನಾಗಿದ್ದ ಎನ್ನುವುದನ್ನು ಹತ್ತನೆ ಶತಮಾನದ ಸ್ಕಂದ ಪುರಾಣ ಉಲ್ಲೇಖಿಸುತ್ತದೆ. ಇದು ಎಲ್ಲವನ್ನೂ ಪುರಾಣೀಕರಿಸುವ ಕಾಲಘಟ್ಟ. ಬಹುಶಃ ಸ್ಕಂದ ಪುರಾಣದ ಉಲ್ಲೇಖದ ನಂತರ ವಾಲ್ಮೀಕಿ ದರೋಡೆಕೋರನಾಗಿದ್ದ ಎನ್ನುವ ಕತೆಯನ್ನು ಹೆಣೆಯಲಾಗಿದೆ. 'ಮರ ಮರ' ಎನ್ನುವ ಮಂತ್ರದ ಉಲ್ಲೇಖ 15 ಶತಮಾನದ 'ಆದ್ಯಾತ್ಮ ರಾಮಾಯಣ' ಮತ್ತು 16 ನೇ ಶತಮಾನದ 'ಆನಂದ ರಾಮಾಯಣ' ದಲ್ಲಿ ಸಿಗುತ್ತದೆ. ಅಂದರೆ 'ಮರ ಮರ' ಮಂತ್ರದಿಂದಲೆ ವಾಲ್ಮೀಕಿ ರಾಮಾಯಣ ರಚಿಸಿದ ಎನ್ನುವುದೂ ಕಟ್ಟುಕತೆ. 13 ಮತ್ತು 16 ನೇ ಶತಮಾನದಲ್ಲಿ ರಾಮನನ್ನು ವಿಷ್ಣುವಿನ ಅವತಾರ ಎಂದು ದೈವೀಕರಿಸಿದ ಮೇಲೆ ವಾಲ್ಮೀಕಿಯ ಬಗೆಗೆ ಇಂತಹ ಕತೆಗಳು ಹೆಣೆಯಲ್ಪಟ್ಟಿವೆ. ಹೆಚ್.ಡಿ.ಸಾಂಕಾಲಿಯ ಅವರ ಪ್ರಕಾರ ವಾಲ್ಮೀಕಿಯ ಕಾಲದಲ್ಲಿಯೇ ಬಿಡಿಬಿಡಿ ಜನಪದ ಕತೆಗಳಲ್ಲಿದ್ದ ರಾಮಕತೆಯನ್ನು ಜೋಡಿಸಿ ಮಹಾಕಾವ್ಯದ ರೂಪಕೊಟ್ಟು ರಾಮನನ್ನು ಶ್ರೀರಾಮನನ್ನಾಗಿಸಿ ಪುನರ್‌ಸೃಷ್ಟಿಸಿದ್ದು ವಾಲ್ಮೀಕಿ. ಆದರೆ ರಾಮನಾಮದ ಬಲದಿಂದಲೇ ವಾಲ್ಮೀಕಿ ರಾಮಾಯಣವನ್ನು ರಚಿಸಿದ ಎಂದು ವಾಲ್ಮೀಕಿಯನ್ನು ಆಧೀನ ಮಾಡಲಾಯಿತು. ಈ ಉದ್ದೇಶಕ್ಕಾಗಿ ವಾಲ್ಮೀಕಿಯ ಬಗೆಗೆ ಇಂತಹ ಕಟ್ಟುಕತೆಗಳನ್ನು ಕಟ್ಟಲಾಯಿತು. ಇದನ್ನು ಪರಿಶೀಲಿಸಿದಾಗ ವಾಲ್ಮೀಕಿ ಬದುಕಿದ್ದ 1500 ವರ್ಷಗಳ ನಂತರ ಆತ 'ದರೋಡೆಕೋರನಾಗಿದ್ದ' ಎನ್ನುವ ಕತೆ ಸಿಗುತ್ತದೆ. ಹೀಗಾಗಿ ಯಾವುದೇ ಅಧಿಕೃತ ದಾಖಲೆಗಳಿಲ್ಲದೆ ಪುರಾಣವನ್ನು ಉಲ್ಲೇಖಿಸುವುದು ಅಪರಾಧವಾಗುತ್ತದೆ ಎಂದು, 2009 ರ 'ಸ್ಟಾರ್ ಇಂಡಿಯಾ ಪ್ರವೇಟ್ ಲಿಮಿಟೆಡ್ ವರ್ಸಸ್ ಸ್ಟೇಟ್ ಆಫ್ ಪಂಜಾಬ್' ಕೇಸಿನಲ್ಲಿ ಜಸ್ಟೀಸ್ ರಾಜೀವ ಭಲ್ಲಾ 'ವಾಲ್ಮೀಕಿ ಋಷಿಪೂರ್ವದಲ್ಲಿ ದರೋಡೆಕೋರನಾಗಿರಲಿಲ್ಲ' ಎನ್ನುವ ತೀರ್ಪು ನೀಡುತ್ತಾರೆ. 2019 ರಲ್ಲಿ ಪ್ರೊ.ಮಂಜುಳ ಸಹದೇವ್ ವಿರುದ್ಧದ ಕೇಸಿನಲ್ಲಿ ಜಸ್ಟೀಸ್ ಅರವಿಂದ್ ಸಿಂಗ್ ಸಾಂಗ್ವಾನ್ ಅವರು ಕೂಡ ರಾಜೀವ ಭಲ್ಲಾ ಅವರ ತೀರ್ಪನ್ನು ಎತ್ತಿಹಿಡಿದಿದ್ದಾರೆ.

ಪಂಜಾಬ್ ಹೈಕೋರ್ಟಿನ ಜಸ್ಟೀಸ್ ರಾಜೀವ ಭಲ್ಲಾ ಅವರು ಮಂಜುಳ ಸಹದೇವ್ ಅವರ ಸಂಶೋಧನೆಯನ್ನು ಅಮೂಲಾಗ್ರವಾಗಿ ಅಧ್ಯಯನ ಮಾಡಿ, ಮೇಲಿನ ಮುಖ್ಯಾಂಶಗಳನ್ನು ಉಲ್ಲೇಖಿಸಿ ಮಹರ್ಷಿ ವಾಲ್ಮೀಕಿ ದರೋಡೆಕೋರನಾಗಿರಲಿಲ್ಲ. ಕಾಲಾನಂತರದಲ್ಲಿ ಆದ ಸೇರ್ಪಡೆಗಳಲ್ಲಿ ಈ ಬಗೆಯ ಕತೆಯನ್ನು ಕಟ್ಟಲಾಗಿದೆ. ಒಂದು ಸಮುದಾಯದ ಧಾರ್ಮಿಕ ಭಾವನೆಗಳಿಗೆ ಧಕ್ಕೆಯಾಗುತ್ತದೆ ಎಂದು ತೀರ್ಪು ನೀಡುತ್ತಾರೆ. ಈ ತೀರ್ಪಿನ ತರುವಾಯ ಬಹುತೇಕ ಉತ್ತರ ಭಾರತದ ರಾಜ್ಯಗಳಲ್ಲಿ ಸಾರ್ವಜನಿಕವಾಗಿ ವಾಲ್ಮೀಕಿಯು ದರೋಡೆಕೋರನಾಗಿದ್ದ ಎನ್ನುವ ಕಥೆಯ ಉಲ್ಲೇಖ ನಿಷೇಧವಾಗಿದೆ. ಅಕಸ್ಮಾತ್ ಈ ಕಥೆಯನ್ನು ಉಲ್ಲೇಖಿಸಿದರೆ ಎಫ್.ಐ.ಆರ್ ದಾಖಲಾಗುತ್ತದೆ.

ಮಹರ್ಷಿ ವಾಲ್ಮೀಕಿಯ ಬಗೆಗಿನ ಅಧ್ಯಯನಗಳು ಮತ್ತು ಸ್ವರಚಿತ ರಾಮಾಯಣವನ್ನು ಆಧರಿಸಿ ನೋಡುವುದಾದರೆ ವಾಲ್ಮೀಕಿ ರಾಮನೆಂಬ ಕಾಲ್ಪನಿಕ ಪಾತ್ರವನ್ನು ಸಶಕ್ತವಾಗಿ ಕಟ್ಟಿದ ಭರತಖಂಡದ ಆದಿಕವಿ, ಬೇಡ ಸಮುದಾಯದ ಮೊದಲ ಸಾಕ್ಷರ. ಸಂಸ್ಕೃತವನ್ನು ಕೆಳಜಾತಿ ದಮನಿತ ಸಮುದಾಯಗಳಿಗೆ ನಿಶೇಧಿಸಿದ್ದ ಕಾಲಘಟ್ಟದಲ್ಲಿ ಸಂಸ್ಕೃತವನ್ನು ಕಲಿತು ಮೇರು ಕಾವ್ಯವನ್ನು ರಚನೆ ಮಾಡಿದ್ದು ಈ ಸಮುದಾಯಗಳಿಗೆ ಒಂದು ಸ್ಫೂರ್ತಿದಾಯಕ ಸಂಗತಿ. ಕೆಳಜಾತಿ ಜನರು ಯಾವುದೇ ಮಹತ್ಸಾಧನೆಯನ್ನು ಮಾಡಿದಾಗ ಮೇಲ್ಜಾತಿಗಳು ಅವರ ಹುಟ್ಟನ್ನೆ ಅನುಮಾನಿಸುವ, ಅವರ ಚಾರಿತ್ರ್ಯವನ್ನು ತಿರುಚುವ ಯತ್ನ ನಡದೇ ಇದೆ. ವಾಲ್ಮೀಕಿ ಋಷಿಪೂರ್ವದಲ್ಲಿ ದರೋಡೆಕೋರನಾಗಿದ್ದ ಎನ್ನುವ ಕಟ್ಟುಕಥೆ ಕೂಡ ಇಂತಹದ್ದೇ ಒಂದು ಪ್ರಯತ್ನ. ಹಾಗಾಗಿ ವಾಲ್ಮೀಕಿಯನ್ನು ಅಕ್ಷರ, ಶಿಕ್ಷಣ, ಜ್ಞಾನ, ಹೋರಾಟದ ಸಂಕೇತವಾಗಿ ಪರಿಭಾವಿಸಬೇಕಿದೆ. ಇನ್ನಾದರೂ ವಾಲ್ಮೀಕಿ ಋಷಿಪೂರ್ವದಲ್ಲಿ ದರೋಡೆಕೋರನಾಗಿದ್ದ ಎನ್ನುವ ಕಟ್ಟುಕತೆಯನ್ನು ಹೇಳುವುದನ್ನು ನಿಲ್ಲಿಸಬೇಕು.



# ವಿಂಟೆಕಾನ್ 2024ರ ವಸ್ತು ಪ್ರದರ್ಶನಕ್ಕೆ ಆಯ್ಕೆಯಾದ ಶರಣಬಸವ ವಿಶ್ವವಿದ್ಯಾಲಯ ಮತ್ತು ಸರ್ಕಾರಿ ಬಾಲಕಿಯರ ಪಿಯು ಕಾಲೇಜಿನ ವಿದ್ಯಾರ್ಥಿಗಳು



**ಕಲಬುರಗಿ;** ಕಲಬುರಗಿ ನಗರದ ಶರಣಬಸವ ವಿಶ್ವವಿದ್ಯಾಲಯ ಮತ್ತು ಸರ್ಕಾರಿ ಬಾಲಕಿಯರ ಪಿಯು ಕಾಲೇಜಿನ ತಲಾ ಇಬ್ಬರು ವಿದ್ಯಾರ್ಥಿಗಳು, ಐಒಟಿ ಆಧಾರಿತ ಮಕ್ಕಳ ಮತ್ತು ಮಹಿಳೆಯರ ಸುರಕ್ಷತೆ, ಜಿಪಿಎಸ್ ಸ್ಥಳ ಹಾಗೂ ಮಾನಿಟರಿಂಗ್ ಸಿಸ್ಟಮ್‌ನ ವಿನೂತನ ಯೋಜನೆಯು ಅಭಿವೃದ್ಧಿಪಡಿಸಿದ್ದಾರೆ. ಈ ಯೋಜನೆಯು ಪ್ರಾಜೆಕ್ಟ್ ಅಭಿವೃದ್ಧಿ ಮತ್ತು ಪ್ರಾಜೆಕ್ಟ್ ಪ್ರದರ್ಶನಕ್ಕಾಗಿ ರಾಜ್ಯಮಟ್ಟದಲ್ಲಿ ಆಯ್ಕೆಯಾದ ಆರು ಯೋಜನೆಗಳಲ್ಲಿ ಒಂದಾಗಿದೆ. ನವೆಂಬರ್ 12 ಮತ್ತು 13 ರಂದು ಬೆಂಗಳೂರಿನಲ್ಲಿ ನಡೆಯಲಿರುವ ಪ್ರತಿಷ್ಠಿತ 5ನೇ IEEE ಇಂಟರ್‌ನ್ಯಾಷನಲ್–WIN-TECHON 2024 ರಲ್ಲಿ ಪ್ರದರ್ಶನ ಮಾಡಲಾಗುವುದು.

ಕಲಬುರಗಿ ನಗರದಲ್ಲಿ ಗುರುವಾರ ಪತ್ರಿಕಾ ಪ್ರಕಟಣೆ ನೀಡಿರುವ ಶರಣಬಸವ ವಿಶ್ವವಿದ್ಯಾಲಯದ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ವಿಭಾಗದ ಪ್ರಾಧ್ಯಾಪಕಿ ಡಾ. ಆಶಾರಾಣಿ ಪಾಟೀಲ, ಏಳನೇ ಸೆಮಿಸ್ಟರ್‌ನಲ್ಲಿರುವ ನಿದಾ ಮುಸ್ಕಾನ್ ಮತ್ತು ವೈಷ್ಣವಿ ಅವರು ಯೋಜನೆಯನ್ನು ಪರಿಪೂರ್ಣವಾಗಿ ರೂಪಿಸಲು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ್ದಾರೆ.

ಶರಣಬಸವ ವಿಶ್ವವಿದ್ಯಾಲಯ ಮತ್ತು ಸರ್ಕಾರಿ ಪಿಯು ಕಾಲೇಜಿನ ಕೀರ್ತಿ ಸುಭಾ? ಮತ್ತು ಅನ್ನಪೂರ್ಣಾ ಜಮಾದಾರ್ ಅವರು ಮಹಿಳೆಯರು ಮತ್ತು ಮಕ್ಕಳಿಗೆ ಅಗತ್ಯವಿರುವ ಭದ್ರತೆಯನ್ನು ಒದಗಿಸುವ ಯೋಜನೆಯನ್ನು ಕಾನ್ಫಿಗರ್ ಮಾಡಿದ್ದಾರೆ.

ಕಲಬುರಗಿಯ ವಿದ್ಯಾರ್ಥಿಗಳು ಸಿದ್ಧಪಡಿಸಿದ ಪ್ರಾಜೆಕ್ಟ್ ಇಡೀ ಉತ್ತರ ಕರ್ನಾಟಕದಿಂದ ಆಯ್ಕೆಯಾದ ಏಕೈಕ ಯೋಜನೆಯಾಗಿದೆ ಮತ್ತು ಪ್ರದರ್ಶನಕ್ಕೆ ಆಯ್ಕೆಯಾದ ಉಳಿದ ಐದು ಯೋಜನೆಗಳು ದಕ್ಷಿಣ, ಮಧ್ಯ ಮತ್ತು ಕರಾವಳಿ ಕರ್ನಾಟಕ ಭಾಗಗಳಿಂದ ಆಯ್ಕೆಯಾಗಿವೆ ಎಂದು ಡಾ. ಪಾಟೀಲ ಹೇಳಿದರು.

IEEE ಬೆಂಗಳೂರು ಮತ್ತು IEEE ಸಿಎಎಸ್ ಬೆಂಗಳೂರು, IEEE ಘಖಇ ಬೆಂಗಳೂರು ಸಹಯೋಗದಲ್ಲಿ ಂಡಿಜಣುಟಿಂ ಆಧಾರಿತ ಎಂಬೆಡೆಡ್ ಸಿಸ್ಟಮ್ ಪ್ರಾಜೆಕ್ಟ್‌ನ ಅಭಿವೃದ್ಧಿಗಾಗಿ ವಿವಿಧ ಘಟಕಗಳು ಮತ್ತು ಕಿಟ್‌ಗಳನ್ನು ಸಮಾಜದ ಕಲ್ಯಾಣ ಯೋಜನೆಗಾಗಿ ಹಾಗೂ ಮಹಿಳೆಯರು ಮತ್ತು ಮಕ್ಕಳಿಗಾಗಿ ಒದಗಿಸಿದೆ. ಈ ಸಂಸ್ಥೆಗಳು ಒದಗಿಸಿದ ಕಿಟ್‌ನಲ್ಲಿ UNO R3 ATmega328p ಬೋರ್ಡ್,Arduino L293ಆ ಮೋಟಾರ್ ಡ್ರೈವ್ ಶೀಲ್ಡ್, ಆಅ ಅಡಾಪ್ಟರ್, ಡಿಜಿಟಲ್ ಮಲ್ಟಿಮೀಟರ್, ಪ್ರೊಫೆಷನಕಲ್ ಸ್ಟಾರ್ಟರ್ ಕಿಟ್, ಗಟಔ ಸಂವೇದಕಗಳು ಮತ್ತು ಮಾಡ್ಯೂಲ್‌ಗಳು, ಸ್ಕೀಮ್ಯಾಟಿಕ್ ಆಧಾರಿತ ಕೋಡ್ ಮತ್ತು ಅಭಿವೃದ್ಧಿ ಯೋಜನೆಗೆ ಅಗತ್ಯವಿರುವ ಎಲ್ಲಾ ರೀತಿಯ ಪರಿಕರಗಳು ಸೇರಿವೆ.

ಖಇಇ ಬೆಂಗಳೂರು ವಿಭಾಗ, ಖಇಇ ಅಂಖ ಬೆಂಗಳೂರು ಚಾಪ್ಟರ್, ಘಖಇ–ವಿಮೆನ್ ಇನ್ ಇಂಜಿನಿಯರಿಂಗ್ ಅಫಿನಿಟಿ ಗ್ರೂಪ್ ಬೆಂಗಳೂರು ವಿಭಾಗದಿಂದ ಅಂತರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗುತ್ತಿದೆ ಎಂದು ಡಾ. ಆಶಾರಾಣಿ ಪಾಟೀಲ್ ಹೇಳಿದರು.

# ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಯಂತ್ರದ ಉದ್ಘಾಟನೆ: ರಾಂಪೂರೆ ಕನಸು ನನಸಾಗಿಸುವ ಗುರಿ ಹೊಂದಿರುವೆ: ನಮೋಶಿ




**ಕಲಬುರಗಿ :** ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಮಹಾದೇವಪ್ಪ ರಾಂಪೂರೆಯವರ ಕನಸನ್ನು ನನಸು ಮಾಡುವ ಗುರಿ ಹೋಂದಿರುವೆ ಎಂದು ಸಂಸ್ಥೆಯ ಅಧ್ಯಕ್ಷರೂ ಆದ ರಾಜ್ಯ ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ. ನಮೋಶಿ ಅವರು ಹೇಳಿದರು.

ಸಂಸ್ಥೆಯ ಬಸವೇಶ್ವರ್ ಬೋಧನಾ ಹಾಗೂ ಸಾರ್ವಜನಿಕ ಆಸ್ಪತ್ರೆಯಲ್ಲಿ ನಾಡ ಹಬ್ಬ ದಸರಾ ಹಬ್ಬದ ಪವಿತ್ರ ಹಾಗೂ ಮಹತ್ವದ ಶುಕ್ರವಾರದಂದು ರೇಡಿಯೋಲಾಜಿ ಡಿಪಾರ್ಟ್ಮೆಂಟ್ ನಲ್ಲಿ ಅತ್ಯಾಧುನಿಕ ಮತ್ತು ನಿಖರವಾದ ಆರೋಗ್ಯ ಮಾಹಿತಿ ಒದಗಿಸುವ ಅಲ್ಟ್ರಾ ಸೌಂಡ್ ಮಶೀನ್‌ಗಳಾದ ಮೈಂಡ್ರೀ ರೇಸೋನಾ 19 ಎಲೈಟ್ ಎಡಿಷನ್, ವಿಪೊ?ರೀ ಜಿ ಈ ಲಾಜಿಕ್ ಪಿ9, ಪೊ?ರ್ಟೆಬಲ್ ಮೈಂಡ್ರಿ ಎಂ 6 ಸುಮಾರು 75 ಲಕ್ಷ ರೂ.ಗಳ ವೆಚ್ಚದ ಯಂತ್ರಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತ ಆಡಳಿತ ಮಂಡಳಿಯ ಸದಸ್ಯರು ಮುಂಬರುವ ದಿನಗಳಲ್ಲಿ ಬಸವೇಶ್ವರ್ ಆಸ್ಪತ್ರೆಯನ್ನು ಈ ಭಾಗದಲ್ಲಿ ಅತ್ಯಾಧುನಿಕ ಆಸ್ಪತ್ರೆಗಯಾಗಿ ಪರಿವರ್ತಿಸಲು ಬದ್ಧ ಎಂಧರು.

ವೈದ್ಯಕೀಯ ಸಿಬ್ಬಂದಿಯ ಸಹ ಆಸ್ಪತ್ರೆಯಲ್ಲಿ ಒಳ್ಳೆಯ ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು ಹೀಗಾಗಿ ರೋಗಿಗಳ ಸಂಖ್ಯೆ ಹೆಚ್ಚುತ್ತಿದೆ ಎಂದು ಹೇಳಿದ ಅವರು, ಇಷ್ಟೆ ಅಲ್ಲದೆ ರೇಡಿಯೋಲಾಜಿ ಡಿಪಾರ್ಟ್ಮೆಂಟ್ ಗೆ ಇನ್ನು ಹೆಚ್ಚಿನ ಸ್ಥಳಾವಕಾಶ ಒದಗಿಸಿ ಸುಮಾರು 1.5 ಕೋಟಿ ಗೂ. ಗಳ ವೆಚ್ಚದಲ್ಲಿ ಸುಸಜ್ಜಿತ ಕಚೇರಿ ಮಾಡಲು ಆಡಳಿತ ಮಂಡಳಿ ಸಿದ್ಧವಾಗಿದೆ.ಬೇರೆ ಬೇರೆ ವಿಭಾಗಗಳಲ್ಲಿ ಬೇಕಾಗಿರುವ ಯಂತ್ರಗಳನ್ನು ಸಾಮಗ್ರಿಗಳನ್ನು ಬರುವ ದಿನಗಳಲ್ಲಿ ಒದಗಿಸಿ ಬಸವೇಶ್ವರ್ ಆಸ್ಪತ್ರೆಯು ಅತ್ಯಾಧುನಿಕ ಆಸ್ಪತ್ರೆಯಾಗಿ ಪರಿವರ್ತನೆಗೊಳಿಸಲಾಗುವದು ಕಲ್ಯಾಣ ಕರ್ನಾಟಕ ಭಾಗದ ರೋಗಿಗಳಿಗೆ ವರದಾನವಾಗಿ ಆಸ್ಪತ್ರೆಯನ್ನು ಮೇಲ್ದರ್ಜೆಗೆ ಏರಿಸಲಾಗುವುದು ಎಂಧರು.

ಈ ಸಂದರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷ ರಾಜಾ ಭಿ. ಭೀಮಳ್ಳಿ, ಕಾರ್ಯದರ್ಶಿ ಉದಯಕುಮಾರ್ ಚಿಂಚೋಳಿ, ಜಂಟಿ ಕಾರ್ಯದರ್ಶಿ ಡಾ ಕೈಲಾಶ್ ಪಾಟೀಲ್ ಹಾಗೂ ಎಲ್ಲ ಆಡಳಿತ ಮಂಡಳಿ ಸದಸ್ಯರು, ಮಹಾದೇವಪ್ಪ ರಾಂಪೂರೆ ವೈದ್ಯಕೀಯ ಕಾಲೇಜಿನ ಡೀನ್ ಡಾ. ಶರಣಗೌಡ ಪಾಟೀಲ್ ಹಾಗೂ ಮೆಡಿಕಲ್ ಸುಪರಿಂಟೆಂಡೆಂಟ್ ಡಾ. ಆನಂದ್ ಪಾರಂಪಳ್ಳಿ ಹಾಗೂ ವೈದ್ಯಕೀಯ ಅರೇ ವೈದ್ಯಕೀಯ ಸಿಬ್ಬಂದಿ ಉಪಸ್ಥಿತರಿದ್ದರು.

# ಕಾಮನೂರು, ಮೋರನಾಳ ದತ್ತು ಗ್ರಾಮಕ್ಕೆ ಆಯ್ಕೆ



**ಕೊಪ್ಪಳ:** ನರೇಗಾದಡಿ ಕಾಮನೂರು ಹಾಗೂ ಮೋರನಾಳ ಗ್ರಾಮಗಳನ್ನು ಜಿಪಂ ದತ್ತು ಗ್ರಾಮಗಳೆಂದು ಘೋಷಿಸಿದ್ದು, ಅಧಿಕಾರಿಗಳ ತಂಡ ಗ್ರಾಮಕ್ಕೆ ಭೇಟಿ ನೀಡಿ ಸಾರ್ವಜನಿಕರೊಂದಿಗೆ ಸಭೆ ನಡೆಸಿತು.

ಇತ್ತೀಚೆಗೆ ನಡೆದ ಜಿಪಂ ದಿಶಾ ಸಮಿತಿ ಸಭೆಯಲ್ಲಿ ದತ್ತು ಗ್ರಾಮ ಸ್ವೀಕಾರ ಚರ್ಚೆ ನಡೆದಿತ್ತು. ಈ ವೇಳೆ ಸಂಸದ ರಾಜಶೇಖರ ಹಿಟ್ನಾಳ ಕಾಮನೂರು ಹಾಗೂ ಮೋರನಾಳ ಗ್ರಾಮ ಆಯ್ಕೆಗೆ ಸೂಚಿಸಿದರು. ಈ ಬೆನ್ನಲ್ಲೇ ಜಿಪಂ ಯೋಜನಾ ನಿರ್ದೇಶಕ ಪ್ರಕಾಶ ವಡ್ಡರ ನೇತೃತ್ವದ ತಂಡ ಭೇಟಿ ನೀಡಿ ಪರಿಶೀಲಿಸಿತು. ಗ್ರಾಮದ ಸರ್ವಾಂಗೀಣ ಅಭಿವೃದ್ಧಿಗಾಗಿ ದತ್ತು ಪಡೆಯಲಾಗಿದೆ. ಗ್ರಾಮಸ್ಥರು ಅಭಿವೃದ್ಧಿ ಕಾರ್ಯಕ್ಕೆ ಕೈ ಜೋಡಿಸುವಂತೆ ಮನವಿ ಮಾಡಿದರು. ಗ್ರಾಪಂ, ಕೃಷಿ, ತೋಟಗಾರಿಕೆ, ಅರಣ್ಯ, ರೇಷ್ಮೆ ಇಲಾಖೆ ಕಾಮಗಾರಿ ಅನುಷ್ಠಾನಕ್ಕೆ ಇರುವ ಅವಕಾಶಗಳ ಕುರಿತು ಜನರಿಗೆ ತಿಳಿಸಿದರು. ಜನರು ತಮ್ಮೂರಿಗೆ ಬೇಕಾದ ಯೋಜನೆಗಳ ಕುರಿತು ಅಭಿಪ್ರಾಯ ಹಂಚಿಕೊಂಡರು. ತಾಂತ್ರಿಕ ಸಹಾಯಕರು ವಾರ್ಡ್?ವಾರು ತೆರಳಿ ಚರಂಡಿ, ರಸ್ತೆ, ಶಾಲಾಭಿವೃದ್ಧಿ ಕಾಮಗಾರಿಗಳ ವಿವರ ಪಡೆದರು. ನರೇಗಾ ಹಾಗೂ ವಿವಿಧ ಯೋಜನೆಗಳನ್ನು ಒಗ್ಗೂಡಿಸಿಕೊಂಡು ಕಾಮಗಾರಿ ಅನುಷ್ಠಾನಗೊಳಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದರು. ಸಣ್ಣ, ಅತೀ ಸಣ್ಣ ರೈತರಿಗೆ ನರೇಗಾದಡಿ ಸಿಗುವ ಸೌಲಭ್ಯಗಳ ಮಾಹಿತಿ ಒದಗಿಸಿದರು.

ಅಂಗನವಾಡಿಗೆ ಭೇಟಿ ನೀಡಿದ ತಂಡ ಮಕ್ಕಳ ತೂಕ ಹಾಕುತ್ತಿರುವ ಬಗ್ಗೆ ಪರಿಶೀಲಿಸಿದರು. ಮಕ್ಕಳಿಗೆ ಆಹಾರ ವಿತರಿಸುವ ಕುರಿತು ಮಾಹಿತಿ ಪಡೆದರು. ಗ್ರಾಮದ ಕೆರೆ ಇತರ ಸ್ಥಳ ಪರಿಶೀಲಿಸಿ ಕೈಗೊಳ್ಳಬಹುದಾದ ಕಾಮಗಾರಿಗಳ ಬಗ್ಗೆ ಸಮಾಲೋಚಿಸಿದರು. ನರೇಗಾ ಸಹಾಯಕ ನಿರ್ದೇಶಕ ಯಂಕಪ್ಪ, ಗ್ರಾಮಸ್ಥರಾದ ದ್ಯಾಮಣ್ಣ ಹೊನ್ನತ್ತಿ, ಮಲ್ಲಪ್ಪ ಕೊಡ್ಲಿ, ದೇವಪ್ಪ, ಮಹಾದೇವಪ್ಪ ಕುರಿ, ಪಿಡಿಒ ಸಂಗಮೇಶ ತೇರಿನ, ನರೇಗಾ ಸಿಬ್ಬಂದಿ ಪಂಪನಗೌಡ, ಯಮನೂರಪ್ಪ, ದೇವರಾಜ ಪತ್ತಾರ ಇತರರಿದ್ದರು.


# ಕುಷ್ಠ, ಕ್ಷಯ ರೋಗದ ಬಗ್ಗೆ ಮೂಡಲಿ ಜಾಗೃತಿ



**ದಾವಣಗೆರೆ :** ಕುಷ್ಠ ಹಾಗೂ ಕ್ಷಯ ರೋಗದ ಕುರಿತಂತೆ ಸಾರ್ವಜನಿಕರಿಗೆ ವ್ಯಾಪಕ ಮಾಹಿತಿ ನೀಡಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸೂಚನೆ ನೀಡಿದರು. ಜಿಲ್ಲಾಡಳಿತ ಭವನದಲ್ಲಿ ಗುರುವಾರ ನಡೆದ ಕುಷ್ಠ ರೋಗ ಅಭಿಯಾನ ಕಾರ್ಯಕ್ರಮದ ಜಿಲ್ಲಾ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದರು. ಗ್ರಾಮ ಪಂಚಾಯಿತಿ ಮಟ್ಟದಲ್ಲಿನ ಆಶಾ ಕಾರ್ಯಕರ್ತೆಯರು, ಸ್ಥಳೀಯ ವೈದ್ಯರು ಗ್ರಾಮದ ಮನೆ ಮನೆಗೂ ಭೇಟಿ ನೀಡಿ ಕುಷ್ಠ ರೋಗ ಪತ್ತೆ ಹಚ್ಚುವ ಬಗ್ಗೆ ಮಾಹಿತಿ ನೀಡಬೇಕು. ಪ್ರತಿಯೊಬ್ಬರನ್ನು ತಪಾಸಣೆ ಮಾಡಿ ರೋಗದ ಆರಂಭಿಕ ಗುಣಲಕ್ಷಣಗಳನ್ನು ಖಚಿತಪಡಿಸಿಕೊಂಡು ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿ ಚಿಕಿತ್ಸೆ ನೀಡಬೇಕು ಎಂದು ತಿಳಿಸಿದರು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ. ಇಟ್ನಾಳ್ ಮಾತನಾಡಿ, ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮನೆ ಮನೆಗೆ ತೆರಳಿ ಪರಿಶೀಲನೆ ಮಾಡಿ ಜಾಗೃತಿ ಮೂಡಿಸಬೇಕು ಎಂದರು. ಜಿಲ್ಲೆಯ 32 ಗ್ರಾಮ ಪಂಚಾಯಿತಿಗಳು ಕ್ಷಯರೋಗ ಮುಕ್ತ ಪಂಚಾಯಿತಿಗಳಾಗಿವೆ. 2024 ರ ಸೆ. ತಿಂಗಳಲ್ಲಿ 49 ಕುಷ್ಠ ರೋಗಿಗಳು ಗುಣಮುಖರಾಗಿದ್ದು 29 ಹೊಸ ಪ್ರಕರಣ ದಾಖಲಾಗಿವೆ. ಕ್ಷಯರೋಗ ಚಿಕಿತ್ಸೆ ಪಡೆಯುವ ರೋಗಿಗಳಿಗೆ ತಿಂಗಳಿಗೆ 500 ರೂ. ನೀಡಲಾಗುತ್ತಿದೆ. ನ. 1 ರಿಂದ ಈ ಮೊತ್ತವನ್ನು 1 ಸಾವಿರ ರೂ.ಗೆ ಹೆಚ್ಚಿಸಲಾಗುವುದು. ನಿಕ್ಷಯ ಮಿತ್ರ ಯೋಜನೆ ಖಾಸಗಿ ವಲಯದಲ್ಲಿ ಪ್ರತಿ ರೋಗಿಗೆ 500 ರೂ. ಹಾಗೂ ಚಿಕಿತ್ಸೆ ಪೂರ್ಣಗೊಂಡ ನಂತರ 2 ವರ್ಷಗಳವರೆಗೆ ರೋಗಿಯ ನಿಗಾ ವಹಿಸಲಾಗುತ್ತದೆ ಎಂದು ಜಿಲ್ಲಾ ಕ್ಷಯರೋಗ ಅಧಿಕಾರಿ ಸಭೆಗೆ ಮಾಹಿತಿ ನೀಡಿದರು.

ಇದೇ ವೇಳೆ ಮಾನಸಿಕ ಆರೋಗ್ಯದ ಸಮಸ್ಯೆಯಿಂದ ಬಳಲುತ್ತಿರುವವರು ಟೆಲಿ ಮನಸ್‌ಗೆ 14416 ಗೆ ಕರೆ ಮಾಡಿ ಮುಕ್ತ ಸಮಾಲೋಚನೆ ಮಾಡಬಹುದು ಎಂಬ ಪೋಸ್ಟರ್ ಬಿಡುಗಡೆ ಮಾಡಲಾಯಿತು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ, ಸರ್ವೇಕ್ಷಣಾಧಿಕಾರಿ ಡಾ.ಜಿ.ಡಿ. ರಾಘವನ್, ವಿವಿಧ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳು ಇದ್ದರು.

# ಒತ್ತಡಕ್ಕೆ ಒಳಗಾಗದೇ ಕಾರ್ಯನಿರ್ವಹಿಸಿ, ಸಿಇಒ ರಾಹುಲ್ ರತ್ನಂ ಪಾಂಡೆಯ ಸಲಹೆ



**ಕೊಪ್ಪಳ:** ಮಾನಸಿಕ ಆರೋಗ್ಯ ಪ್ರತಿಯೊಬ್ಬರ ಹಕ್ಕು. ಎಲ್ಲ ಅಧಿಕಾರಿಗಳು ಒತ್ತಡಕ್ಕೆ ಒಳಗಾಗದೇ ಕಾರ್ಯನಿರ್ವಹಿಸುವಂತೆ ಜಿಪಂ ಸಿಇಒ ರಾಹುಲ್ ರತ್ನಂ ಪಾಂಡೆಯ ಅಧಿಕಾರಿಗಳಿಗೆ ಸಲಹೆ ನೀಡಿದರು.

ಜಿಲ್ಲಾಡಳಿತ, ಆರೋಗ್ಯ ಇಲಾಖೆಯಿಂದ ನಗರದ ಜೆ.ಎಚ್?.ಪಟೇಲ್? ಸಭಾಂಗಣದಲ್ಲಿ ಗುರವಾರ ಹಮ್ಮಿಕೊಂಡಿದ್ದ ಮಾನಸಿಕ ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಾನಸಿಕತೆ ಎಲ್ಲರಲ್ಲೂ ಸಾಮಾನ್ಯ. ಆದರೆ, ಮಾನಸಿಕ ಆರೋಗ್ಯದ ಬಗ್ಗೆ ನಿರ್ಲಕ್ಷ?ಯ ತೋರಬೇಡಿ. ದೈಹಿಕ ಆರೋಗ್ಯದಷ್ಟೇ ಮಾನಸಿಕ ಆರೋಗ್ಯ ಮುಖ್ಯ. ಎರಡು ಸಮತೋಲನವಾಗಿರಬೇಕು. ಎಲ್ಲ ಸಮಸ್ಯೆಗೆ ಪರಿಹಾರ ಇರಲಿದೆ.

ಮನದ ಮಾತನ್ನು ಇನ್ನೊಬ್ಬರೊಂದಿಗೆ ಹಂಚಿಕೊಳ್ಳಬೇಕು. ಕುಟುಂಬದಲ್ಲಿ ಪ್ರೀತಿಯಿಂದ ನಡೆದುಕೊಳ್ಳಿ. ಇದರಿಂದ ಮಾನಸಿಕ ಆರೋಗ್ಯ ಉತ್ತಮವಾಗಿರಲಿದೆ. ಆರೋಗ್ಯ ಇಲಾಖೆ ಮಾನಸಿಕ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಿ. ರೈತಾಪಿ ವರ್ಗದಲ್ಲಿ ಹೆಚ್ಚು ಕಾರ್ಯಕ್ರಮ ಮಾಡಿ. ರೈತರು ಆತ್ಮಹತ್ಯೆ ಮಾಡಿಕೊಳ್ಳುವುದನ್ನು ತಡೆಗಟ್ಟಿ. ಮನೆ ಹಾಗೂ ಕೆಲಸದ ಸ್ಥಳದಲ್ಲಿ ಜವಾಬ್ದಾರಿ, ಪ್ರಾಮಾಣಿಕತೆಯಿಂದ ಕೆಲಸ ಮಾಡಿ. ಮಾನಸಿಕ ಒತ್ತಡಕ್ಕೆ ಒಳಗಾಗಬೇಡಿ ಎಂದರು.

ಹಿರಿಯ ಸಿವಿಲ್? ನ್ಯಾಯಾಧೀಶ ಮಹಾಂತೇಶ ಎಸ್?.ದರಗದ ಮಾತನಾಡಿ, ಕೆಲಸ ನಿರ್ವಹಿಸುವ ಸ್ಥಳದಲ್ಲಿ ಒಳ್ಳೆಯ ವಾತಾವರಣ ಇರುವಂತೆ ನೋಡಿಕೊಳ್ಳಿ, ಪ್ರಾಮಾಣಿಕತೆ, ಶಿಸ್ತು, ಒಳ್ಳೆಯ ಗುಣಗಳನ್ನು ಅಳವಡಿಸಿಕೊಳ್ಳಿ, ಪ್ರತಿಯೊಬ್ಬರಲ್ಲಿ ಒಳ್ಳೆಯತನ ಕಾಣಿ. ಯೋಗ, ಧ್ಯಾನ ಮೂಲಕ ಮನಸ್ಸು ಹತೋಟಿಯಲ್ಲಿಟ್ಟುಕೊಳ್ಳಬಹುದು ಎಂದು ಅಭಿಪ್ರಾಯಪಟ್ಟರು.

ಡಿಎಚ್?ಒ ಡಾ.ಟಿ.ಲಿಂಗರಾಜು ಮಾತನಾಡಿ, ಕರ್ತವ್ಯ ಸ್ಥಳದಲ್ಲಿ ರಾಪರಸ್ಪರರನ್ನು ಗೌರವದಿಂದ ಕಾಣಿ. ಮೆದಳುನಲ್ಲಿನ ರಾಸಾಯನಿಕ ಬದಲಾವಣೆ, ಮಾದಕ ವಸ್ತುಗಳ ಬಳಕೆ ಮೆದುಳಿನ ಆರೋಗ್ಯ ಹಾಳು ಮಾಡುತ್ತದೆ. ಸೋಂಕು, ಗಡ್ಡೆ, ಪೆಟ್ಟು, ಕುಟುಂಬ, ಹಣಕಾಸು, ಉದ್ಯೋಗ, ರೀತಿ ನೀತಿಗಳ ಗೊಂದಲಗಳು ಮಾನಸಿಕ ರೋಗಕ್ಕೆ ಮುಖ್ಯ ಕಾರಣ. ಮಾನಸಿಕ ಖಾಯಿಲೆ ಬಗ್ಗೆ ನಿರ್ಲಕ್ಷ?ಯ ಬೇಡ. ಮೊದಲ ಹಂತದಲ್ಲೇ ಪತ್ತೆ ಮಾಡಿ ಚಿಕಿತ್ಸೆ ಪಡೆದು ಆರೋಗ್ಯವಂತರಾಗಿ ಬಾಳಬೇಕೆಂದು ಸಲಹೆ ನೀಡಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಪ್ರಕಾಶ ಎಚ್?. ಮಾತನಾಡಿ, ಪ್ರತಿ ವರ್ಷ ಅ.10ರಂದು ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಆಚರಿಸಲಾಗುತ್ತದೆ ಎಂದರು.

ಮನೋ ವೈದ್ಯರಾದ ಡಾ.ಲಕ್ಷ್?ಮದೇವಿ ಪಾಟೀಲ್? ವಿಶೇಷ ಉಪನ್ಯಾಸ ನೀಡಿದರು. ಡಾ.ರವೀಂದ್ರನಾಥ ಎಂ.ಎಚ್?., ಆರ್?ಸಿಎಚ್? ಅಧಿಕಾರಿ ಡಾ.ಪ್ರಕಾಶ ವಿ., ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ವೆಂಕಟೇಶ ಇತರರಿದ್ದರು.

# ಸಮಗ್ರ ಕೃಷಿಯಿಂದ ಮಾದರಿಯಾದ ರೈತ



**ಮುಂಡರಗಿ:** ಸಾಂಪ್ರದಾಯಿಕ ಕೃಷಿಯೊಂದಿಗೆ ದೀರ್ಘಾವಧಿ ಆದಾಯ ನೀಡುವ ಅರಣ್ಯ ಕೃಷಿ ಕೈಗೊಂಡಿರುವ ಪಟ್ಟಣದ ಯುವ ರೈತ ಮಂಜಪ್ಪ ಹುಯಿಲಗೋಳ ಅವರು ನಿಯಮಿತವಾಗಿ ಸಾಕಷ್ಟು ಆದಾಯ ಪಡೆಯುತ್ತಿದ್ದಾರೆ. ತಾಲ್ಲೂಕಿನ ಇತರ ರೈತರಿಗೆ ಮಾದರಿಯಾಗಿದ್ದಾರೆ.

ಎಂಟು ಎಕರೆ ಸ್ವಂತ ಜಮೀನು ಹಾಗೂ ಗುತ್ತಿಗೆ ಪಡೆದ 4 ಎಕರೆ ಪ್ರತ್ಯೇಕ ಜಮೀನು ಹೊಂದಿದ್ದು, ಅದರಲ್ಲಿ 4ಎಕರೆ ಸಾಂಪ್ರದಾಯಿಕ ಬೆಳೆ, 4ಎಕರೆ ಜಮೀನಿನಲ್ಲಿ ದೀರ್ಘಾವಧಿ ಬೆಳೆಗಳಿವೆ. ಇನ್ನುಳಿದ 4ಎಕರೆ ಜಮೀನಿನಲ್ಲಿ ತರಕಾರಿ ಬೆಳೆಗಳನ್ನು ಬೆಳೆದಿದ್ದಾರೆ. ನಿಯಮಿತವಾಗಿ ಕೃಷಿ ಕಾಯಕದಲ್ಲಿ ತೊಡಗಿರುವ ಮಂಜಪ್ಪನವರ ಕುಟುಂಬದ ಸದಸ್ಯರೆಲ್ಲ ಕೃಷಿಯಲ್ಲಿ ನೆಮ್ಮದಿ ಕಂಡುಕೊಂಡಿದ್ದಾರೆ.

ಜಮೀನಿನಲ್ಲಿ ನಾಲ್ಕು ಕೊಳವೆ ಬಾವಿಗಳಿದ್ದು, ತೋಟಗಾರಿಕೆ ಇಲಾಖೆಯ ಸಹಾಯಧನದಲ್ಲಿ ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಂಡಿದ್ದಾರೆ. ಬೇಸಿಗೆಯಲ್ಲಿ ಹನಿ ನೀರಾವರಿ ಪದ್ಧತಿಯಿಂದ ದೊಡ್ಡ ಗಿಡಗಳಿಗೆ ನೀರೊದಗಿಸುತ್ತಾರೆ. ಸಾಂಪ್ರದಾಯಿಕ ಬೆಳೆಗಳಾದ ಮೆಕ್ಕೆಜೋಳ, ಸೂರ್ಯಕಾಂತಿ ಹಾಗೂ ತರಕಾರಿ ಬೆಳೆಗಳಿಗೆ ಕಾಲುವೆ ಮೂಲಕ ನೀರು ಹಾಯಿಸುತ್ತಾರೆ.

ಜಮೀನಿನಲ್ಲಿ ದೀರ್ಘಾವಧಿಯ ನಂತರ ಆದಾಯ ತರುವ ಶ್ರೀಗಂಧ ಹಾಗೂ ಮಹಾಗಣಿ ಗಿಡಗಳನ್ನು ಬೆಳೆದಿದ್ದಾರೆ. ಗಿಡಗಳಿಗೆ ನಿಯಮಿತವಾಗಿ ಸಗಣಿ ಗೊಬ್ಬರ ನೀಡುತ್ತಾರೆ. ಆಗಾಗ ಬೆಳೆಯ ಮಧ್ಯದಲ್ಲಿ ರೂಟರ್‌ಗಳಿಂದ ಕಸ ತೆರವುಗೊಳಿಸುತ್ತಾರೆ. ಅದನ್ನೆ ಸಾವಯವ ಗೊಬ್ಬರವನ್ನಾಗಿ ಪರಿವರ್ತಿಸಿ ನಿಯಮಿತವಾಗಿ ಭೂಮಿಗೆ ಸೇರುವಂತೆ ಮಾಡುತ್ತಾರೆ. ಹೀಗಾಗಿ ಮಂಜಪ್ಪನವರ ಜಮೀನಿನಲ್ಲಿ ಮರಗಳು ಹಾಗೂ ಬೆಳೆಗಳು ಮಂಜಪ್ಪನವರ ನಿರೀಕ್ಷೆಯಂತೆ ಬೆಳೆಯುತ್ತಿವೆ.

ಅರಣ್ಯ ಕೃಷಿಯ ಜೊತೆಗೆ ತಮ್ಮ ಇನ್ನುಳಿದ ಜಮೀನಿನನಲ್ಲಿ ಮಂಜಪ್ಪನವರು 90 ಕ್ವಿಂಟಲ್ ಮೆಕ್ಕೆಜೋಳ ಬೆಳೆದಿದ್ದು, ಅದರಿಂದ ?2.87ಲಕ್ಷ ಆದಾಯ ಪಡೆದುಕೊಂಡಿದ್ದಾರೆ. ಅದೇ ರೀತಿ 1ಎಕರೆ ಜಮೀನಿನಲ್ಲಿ ?1.33ಲಕ್ಷ ಖರ್ಚು ಮಾಡಿ ಸೌತೆಕಾಯಿ ಬೀಜೋತ್ಪಾದನೆ ಮಾಡಿದ್ದರು. ಅದರಿಂದ ?3.30ಲಕ್ಷ ಆದಾಯ ಪಡೆದುಕೊಂಡಿದ್ದಾರೆ. ಜೊತೆಗೆ ಹೀರೆಕಾಯಿ, ಹಾಗಲಕಾಯಿ ಬೆಳೆದಿದ್ದು, ಈಗ ಹೀರೆಕಾಯಿ ಕಟಾವು ಮಾಡುತ್ತಿದ್ದಾರೆ. ಸದ್ಯ ತರಕಾರಿ ಮಾರುಕಟ್ಟೆಯಲ್ಲಿ ಒಂದು ಬಾಕ್ಸ್ ಹೀರೇಕಾಯಿ ?500ರಿಂದ ?600 ಮೊತ್ತಕ್ಕೆ ಮಾರಾಟವಾಗುತ್ತಿದ್ದು, ವಾರಕ್ಕೊಮ್ಮೆ ಹೀರೆಕಾಯಿಯೊಂದರಿಂದಲೆ ?12 ಸಾವಿರ ಆದಾಯ ಪಡೆದುಕೊಳ್ಳುತ್ತಿದ್ದಾರೆ. ಬೀಜೋತ್ಪಾದನೆ ಮಾಡಿರುವ ಜಮೀನಿನಲ್ಲಿ ಸದ್ಯ ಟೊಮೊಟೊ,

ಹಾಗಲ, ಬದನೆ ಹಾಗೂ ಮತ್ತಿತರ ತರಕಾರಿಯನ್ನು ಬೆಳೆಯುತ್ತಿದ್ದಾರೆ.

ಜಮೀನಿನಲ್ಲಿ ನಿರ್ಮಿಸಿದ ಮನೆಯಲ್ಲಿ 4 ಎತ್ತು, 2 ಎಮ್ಮೆ, 10 ಆಡು, ಟಗರುಗಳನ್ನು ಸಾಕಿದ್ದಾರೆ. ಮನೆ ಬಳಕೆಯ ಜೊತೆಗೆ ಹೆಚ್ಚುವರಿ ಹಾಲನ್ನು ಲೀಟರ್ ಒಂದಕ್ಕೆ ?40 ಅದರಲ್ಲಿ ಪಟ್ಟಣದಲ್ಲಿ ಮಾರಾಟ ಮಾಡುತ್ತಿದ್ದಾರೆ.

# ಕಲಬುರಗಿಯಲ್ಲಿ ಕನ್ನಡ ಜ್ಯೋತಿ ರಥ ಯಾತ್ರೆಗೆ ಅದ್ದೂರಿ ಸ್ವಾಗತ: ಕಲಾ ಮೇಳದ ವರ್ಣರಂಜಿತ ಪ್ರದರ್ಶನ ಅನಾವರಣ



**ಕಲಬುರಗಿ :** ನೃಪತುಂಗನ ನಾಡಿಗೆ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಕನ್ನಡ ಜ್ಯೋತಿ ಹೊತ್ತ ರಥ ಯಾತ್ರೆಯ ಆಗಮನವಾಗಿದ್ದು,

ಶುಕ್ರವಾರ ನಗರದಿಂದ ಹೊರಡುವ ಮುನ್ನ ಕಲಾ ಮೇಳದ ವರ್ಣರಂಜಿತ ಪ್ರದರ್ಶನ ದೊಂದಿಗೆ ರಥದ ಮುಂದಿನ ಪಯಣಕ್ಕೆ ಬೀಳ್ಕೊಡಲಾಯಿತು.

ಶುಕ್ರವಾರ ಮುಂಜವಿನ ಮುಸುಕು ಹಾಕಿದ ಕಲಬುರಗಿ ವಾತಾವರಣದಲ್ಲಿ ತುಸು ತುಂತುರು ಹನಿಗಳ ಮಳೆಯ ಸಿಂಚನ ಹಾಗೂ ಕನ್ನಡಿಗರ ಮನಸ್ಸುಗಳ ಅಸ್ಮಿತೆಯನ್ನು ನಗರದಲ್ಲಿ ಕರುಗಿದ ಕನ್ನಡ ತಾಯಿಯ ಮೆರವಣಿಗೆಯಲ್ಲಿ ಅನಾವರಣಗೊಂಡಿತು.

ಬೆಳಿಗ್ಗೆ 8.30 ಗಂಟೆ ಸುಮಾರಿಗೆ ನಗರದ ಸರದಾರ ವಲ್ಲಭಭಾಯಿ ಪಟೇಲ್ ವೃತ್ತಕ್ಕೆ ರಥ ಯಾತ್ರೆ ಆಗಮಿಸಿತ್ತಿದ್ದಂತೆ ಕನ್ನಡಾಂಬೆಯ ಝೇಂಕಾರ, ಸಮ್ಮೇಳನಕ್ಕೆ ಜೈಕಾರ ಎಲ್ಲವೂ ಮೈ ನವಿರೇಳುವಂತೆ ಮಾಡಿದವು. ಚಿಟ್ಟಲಗಿ ವಾದನ, ಡೊಳ್ಳು ಕುಣಿತದ ವಾದ್ಯ ಮೇಳಗಳಿಗೆ ಪುಳಕಗೊಂಡ ಮೈ ಮನಗಳು ಕನದನಡಾಂಬೆಯನ್ನು ಸ್ಮರಿಸುತ್ತಾ ಹೆಜ್ಜೆ ಹಾಕಿದರು.

ಸಕ್ಕರೆ ನಾಡು ಮಂಡ್ಯದಲ್ಲಿ ಡಿ.20 ರಿಂದ ಮೂರು ದಿನಗಳ ಕಾಲ ನಡೆಯಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ನಿಮಿತ್ಯ ನಾಡಿನಾದ್ಯಂತ ಸಂಚರಿಸುತ್ತಿರುವ ಕನ್ನಡ ಜ್ಯೋತಿ ರಥ ಯಾತ್ರೆ ಎಲ್ಲೆಡೆ ಪಯಣಿಸಿ ನಾಡಿನ ಜನತೆಗೆ ನುಡಿ ಜಾತ್ರೆಗೆ ಆಹ್ವಾನ ನೀಡಿತ್ತು.

ಭವ್ಯ ಮೆರವಣಿಗೆಗೆ ಡೊಳ್ಳು ಬಾರಿಸಿ ಚಾಲನೆ ನೀಡಿ ಮಾತನಾಡಿದ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು, ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ರಾಜ್ಯದಲ್ಲಿ ಸಂಚರಿಸುತ್ತಿರುವ ಕನ್ನಡ ಜ್ಯೋತಿ ರಥ ಯಾತ್ರೆಯು ಕನ್ನಡಿಗರಲ್ಲಿ ನಾಡು ನುಡಿಯ ಜಾಗೃತಿಯನ್ನು ಮೂಡಿಸುತ್ತಿದೆ. ಕನ್ನಡಿಗರಲ್ಲಿ ಭಾಷೆಯ ಅಭಿಮಾನವನ್ನು ಮತ್ತು ನಾಡ ಪ್ರೇಮವನ್ನು ಹೆಚ್ಚಿಸಲು ಜಿಲ್ಲೆಗಳಲ್ಲಿ ಯಾತ್ರೆ ಸಂಚರಿಸುವುದರ ಮೂಲಕ ಜಾಗೃತಿಯ ಸಂದೇಶವನ್ನು ಮೊಳಗಿಸುತ್ತಿದೆ.

ಎಲ್ಲ ಕನ್ನಡಿಗರು ಕನ್ನಡ ರಥ–'ವನ್ನು ಸಂಭ್ರಮದಿಂದ ಸ್ವಾಗತಿಸಿ ಸಾಹಿತ್ಯ ಸಮ್ಮೇಳನಕ್ಕೆ ಶುಭ ಕೋರುವ ಜೊತೆಗೆ ರಥವು ಕನ್ನಡಿಗರ ನಡುವೆ ಭಾವನಾತ್ಮಕ ಸಂಬಂಧವನ್ನು ವೃದ್ಧಿಗೊಳಿಸುತ್ತಿದೆ ಎಂದರು.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಮಾತನಾಡಿ, ರಾಜ್ಯದ ಹಲವು ಜಿಲ್ಲೆಗಳಲ್ಲಿ ಸಂಚರಿಸಿದ ಕನ್ನಡ ರಥವು ಕಲಬುರಗಿಗೆ ಪ್ರವೇಶಿಸುತ್ತಿದ್ದಂತೆ ಜಿಲ್ಲಾಡಳಿತದಿಂದ ಸಂಭ್ರಮದ ಸ್ವಾಗತ ಕೋರಲಾಗಿದೆ. ನುಡಿ ಸಮ್ಮೇಳನಕ್ಕೆ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನ ಭಾಗವಹಿಸಿ ಯಶಸ್ವಿಗೆ ಕಾರಣಕರ್ತರಾಗಬೇಕು ಎಂದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಮಾತನಾಡಿ,

ಕನ್ನಡ ರಥವು ಕೇವಲ ಒಂದು ರಥ–'ವಲ್ಲ. ಇದು ಕನ್ನಡದ ಮನಸ್ಸುಗಳನ್ನು ಒಗ್ಗೂಡಿಸುವ ರಥವಾಗಿದ್ದು, ಕನ್ನಡಿಗರು ಜಾತಿ–ಮತ–ಪಂಥ

ಲಿಂಗ ಎಂಬ ಬೇಧವನ್ನು ಮರೆತು ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಯಾಗಿ ನಡೆಯಲು ನಾವೆಲ್ಲರೂ ಕಂಕಣಬದ್ಧರಾಗಬೇಕಾಗಿದೆ ಎಂದ ಅವರು,

ಪರಿಷತ್ತಿನ ರಾಜ್ಯಾಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿಯವರ ಆಶಯದಂತೆ ಕನ್ನಡ ರಥವು ಸಮ್ಮೇಳನದ ಪ್ರಚಾರದ ಜೊತೆಗೆ ಕನ್ನಡದ ಮನಸ್ಸುಗಳನ್ನು ಒಗ್ಗೂಡಿಸುವ ಮಹತ್ವದ ಕಾರ್ಯ ಮಾಡುತ್ತಿದೆ ಎಂದು ಹೇಳಿದರು.

ಕಲಬುರಗಿ ರಂಗಾಯಣದ ನಿರ್ದೇಶಕಿ ಡಾ. ಸುಜಾತಾ ಜಂಗಮಶೆಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರು, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯ ಸುರೇಶ ಡಿ. ಬಡಿಗೇರ, ಜಿಲ್ಲಾ ಕಸಾಪದ ಗೌರವ ಕಾರ್ಯದರ್ಶಿ ಶಿವರಾಜ ಅಂಡಗಿ, ಧರ್ಮಣ್ಣ ಎಚ್. ಧನ್ನಿ, ಕೋಶಾಧ್ಯಕ್ಷ ಶರಣರಾಜ ಛಪ್ಪರಬಂದಿ, ಪ್ರಮುಖರಾದ ಮಲ್ಲಿಕಾರ್ಜುನ ಸಾರವಾಡ, ಕಲ್ಯಾಣರಾವ ಪಾಟೀಲ, ಬಾಬುರಾವ ಕೋಬಾಳ, ಶಿವಲಿಂಗಪ್ಪ ಅಷ್ಟಗಿ, ರವೀಂದ್ರಕುಮಾರ ಭಂಟನಳ್ಳಿ, ಕಲ್ಯಾಣಕುಮಾರ ಶೀಲವಂತ, ಧರ್ಮರಾಜ ಜವಳಿ, ಗುರುಬಸಪ್ಪ ಸಜ್ಜನಶೆಟ್ಟಿ, ಶರಣಬಸಪ್ಪ ಕೋಬಾಳ, ಶಾಮಸುಂದರ ಕುಲಕರ್ಣಿ, ಪ್ರಭುಲಿಂಗ ಮೂಲಗೆ, ಸಂತೋಷ ಕುಡಳ್ಳಿ, ಎಂ.ಎನ್. ಸುಗಂಧಿ, ವಿನೋದಕುಮಾರ ಜೇನವೇರಿ, ಸೇವಂತಾ ಚವ್ಹಾಣ, ಶರಣಬಸಪ್ಪ, ರಾಜೇಂದ್ರ ಮಾಡಬೂಳ, ಪ್ರಕಾಶ ಗೊಣಗಿ, ಬಾಬುರಾವ ಪಾಟೀಲ, ಗಣೇಶ ಚಿನ್ನಾಕಾರ, ಸಿದ್ದಲಿಂಗ ಬಾಳಿ, ಮಂಜುನಾಥ ಕಂಬಾಳಿಮಠ, ರಮೇಶ ಬಡಿಗೇರ, ರೇವಣಸಿದ್ದಪ್ಪ ಜೀವಣಗಿ, ಹಣಮಂತ ಖಜೂರಿ, ಮಹೇಶ ಚಿಂತನಪಳ್ಳಿ, ಕಲಬುರಗಿ ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ನಿರ್ವಾಹಕ ಡಾ. ಸದಾನಂದ ಪೆರ್ಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಒಳ ಮೀಸಲಾತಿ ಜಾರಿಗೊಳಿಸಿ ಇಲ್ಲವೇ ಕುರ್ಚಿ ಬಿಡಿ ಎಚ್ ಹನುಮಂತಪ್ಪ ಆಗ್ರಹ

● ವಾರ್ತಾಲೋಕ ವಾರ್ತೆ



**ಬಳ್ಳಾರಿ :ಅ16** .ಕೋರ್ಟ್ ಆದೇಶ ವಿದ್ದರೂ ಸಹ ಪರಿಶಿಷ್ಟ ಜಾತಿಯಲ್ಲಿ ಮಾದಿಗ ಜನಾಂಗಕ್ಕೆ ಒಳ ಮೀಸಲಾತಿಯನ್ನು ಜಾರಿಗೊಳಿಸಿದೆ ಎರಡು ಮೂರು ತಿಂಗಳ ಕಾಲ, ಕಾಲ ಹರಣ ಮಾಡುತ್ತಾ ಇಲ್ಲದ ಸಲ್ಲದ ಸಬೂಬುಗಳನ್ನು ಹೇಳಿ ಒಳ ಮೀಸಲಾತಿ ಜಾರಿಗೊಳಿಸುವುದನ್ನು ಮುಂದೂಡುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕಿಡಿ ಕಾರಿದ ಎಚ್ ಹನುಮಂತಪ್ಪ, ಒಳ ಮೀಸಲಾತಿ ಜಾರಿಗೊಳಿಸಿ ಇಲ್ಲವೇ ಕುರ್ಚಿ ಬಿಡಿ ಎಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.

ಅವರು ಇಂದು ಕರ್ನಾಟಕ ರಾಜ್ಯ ಸರ್ಕಾರದ ವಿಳಂಬ ಧೋರಣೆಯನ್ನು ಖಂಡಿಸಿ ಜಿಲ್ಲಾಧಿಕಾರಿಗಳ ಕಚೇರಿಯ ಮುಂದೆ ಪ್ರತಿಭಟನಾ ಧರಣಿಯಲ್ಲಿ ಪಾಲ್ಗೊಂಡ ಜನರನ್ನು ಉದ್ದೇಶಿಸಿ ಮಾತನಾಡಿ, ಒಳ ಮೀಸಲಾತಿಯನ್ನು ಜಾರಿಗೊಳಿಸುವಲ್ಲಿ ಆಯಾ ರಾಜ್ಯ ಸರ್ಕಾರಗಳು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸುಪ್ರೀಂ ಕೋರ್ಟ್ ನ ಆದೇಶ ಇದ್ದರೂ ಸಹ ರಾಜ್ಯದ ಮುಖ್ಯಮಂತ್ರಿಗಳು ನಾನು ದಲಿತರ ಪರವಾಗಿ ಎಂದು ಹೇಳಿಕೊಳ್ಳುತ್ತಾ ಬಂದಿರುತ್ತಾರೆ, ಆದರೆ ಅವರು ಒಳ ಮೀಸಲಾತಿಯನ್ನು ಜಾರಿಗೊಳಿಸಲು ಹಿಂದೇಟು ಹಾಕುತ್ತಾ ಈ ಕುರಿತು ಸಮಿತಿಯನ್ನು ರಚಿಸಿ ವರದಿಯ ಪ್ರಕಾರ ಕ್ರಮ ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ. ಸುಪ್ರೀಂ ಕೋರ್ಟ್ ನ ಸ್ಪಷ್ಟವಾದ ಆದೇಶವಿದ್ದರೂ ಸಹ ಮತ್ತೆ ಇನ್ಯಾಕೆ ಸಮಿತಿ ರಚನೆ ಎನ್ನುವುದು ಮುಖ್ಯಮಂತ್ರಿಗೆ ನಮ್ಮ ಪ್ರಶ್ನೆಯಾಗಿದೆ.

ಅಹಿಂದ ಅಹಿಂದ ಎಂದು ಪದೇ ಪದೇ ಎಲ್ಲಾ ವೇದಿಕೆಗಳಲ್ಲಿ ಹೇಳುವ ಮುಖ್ಯಮಂತ್ರಿಗಳು ಒಳ ಮೀಸಲಾತಿಯನ್ನು ಜಾರಿಗೊಳಿಸುವಲ್ಲಿ ಅವರಿಗೆ ಏಕೆ ಹಿಂಜರಿಕೆ ಎಂಬುದು ನಮಗೆ ಅರ್ಥವಾಗುತ್ತಿಲ್ಲ, ಮಾನ್ಯ ಸಿದ್ದರಾಮಯ್ಯನವರು ಹೀಗೆ ಒಳ ಮೀಸಲಾತಿ ಜಾರಿಗೊಳಿಸುವುದನ್ನು ಮುಂದೂಡಿದರೆ ನಾವುಗಳು ಉಪಚುನಾವಣೆಯಲ್ಲಿ ನಮ್ಮ ಶಕ್ತಿಯನ್ನು ತೋರಿಸಿ ಕಾಂಗ್ರೆಸ್ ಪಕ್ಷವನ್ನು ಸೋಲಿಸಬೇಕಾಗುತ್ತದೆ ಎಂದು ಮುಖ್ಯಮಂತ್ರಿಗಳಿಗೆ ಎಚ್ಚರಿಕೆಯನ್ನು ನೀಡಿದರು.

ಅಷ್ಟೇ ಅಲ್ಲದೆ ತರಾತುರಿಯಲ್ಲಿ ಬ್ಯಾಕ್ಲಾಗ್ ಹುದ್ದೆಗಳನ್ನು ತುಂಬುವುದನ್ನು ನಿಲ್ಲಿಸಬೇಕು ಮತ್ತು ಸಂಪೂರ್ಣ ಜಾರಿಗೊಳಿಸಿದ ನಂತರ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಬೇಕು ಆಗ ಮಾತ್ರ ನಮ್ಮ ಜನಾಂಗಕ್ಕೆ ನ್ಯಾಯ ಸಿಗಲಿದೆ ಎಂದು ಹನುಮಂತಪ್ಪ ಅಭಿಪ್ರಾಯಪಟ್ಟರು.

ಈ ಪ್ರತಿಭಟನಾ ಧರಣಿಯಲ್ಲಿ ಈಶ್ವರಪ್ಪ, ಗಿರಿಮಲ್ಲಪ್ಪ ದಾನಪ್ಪ, ಎಚ್ ಹುಸೇನಪ್ಪಾ ಕೊಂಡಯ್ಯ ಜೆ ಮಲ್ಲಿಕಾರ್ಜುನ ಎಕೆ ಹುಲುಗಪ್ಪ ಸಿ ಸೋಮಶೇಖರ್ ಪ್ರಸಾದ್ ಸಂಗನ ಕಲ್ಲು ನೆಟ್ಟಪ್ಪ ವೀರಸ್ವಾಮಿ ಸಾಹಿತಿ ಎನ್ ಡಿ ವೆಂಕಮ್ಮ ರಾಮಣ್ಣ ಅರುಣಾಚಲಂ ಶ್ರೀನಿವಾಸ್ ಭಂಡಾರ ಕರ್ಚೇಡು ಶ್ರೀನಿವಾಸ್ ದುರ್ಗೇಶ್ ಉರಹಳ್ಳಿ ಬಾಬು ಗ್ರೇಸಿ ಪ್ರಸನ್ನ ಕುಮಾರಿ ಈಶ್ವರ ಗುಡಿ ಚಂದ್ರ ಏಕೆ ತಿಪ್ಪಯ್ಯ ಕಪ್ಪಗಲ್ಲು ಹುಲಿಯಪ್ಪ ಸೇರಿದಂತೆ ಸುಮಾರು ನೂರಾರು ಜನ ಈ ಪ್ರತಿಭಟನಾ ಧರಣಿಯಲ್ಲಿ ಭಾಗವಹಿಸಿದ್ದರು.

# ಶಿಕ್ಷಕಿ ಶ್ರೀಮತಿ ರಾಜೇಶ್ವರಿ ಊ ಆ ರವರಿಗೆ ಒಲಿದ ಗುರುಭೂಷಣ ಪ್ರಶಸ್ತಿ

● ವಾರ್ತಾಲೋಕ ವಾರ್ತೆ



**ಸಂಡೂರು :ಅ16** ಸಂಡೂರು ತಾಲೂಕಿನ ಕ್ರಿಯಾಶೀಲ ಶಿಕ್ಷಕಿಯಾದ ಶ್ರೀಮತಿ ರಾಜೇಶ್ವರಿ ಅವರ ವಿಶಿಷ್ಟ ಪೂರ್ಣ ಶೈಕ್ಷಣಿಕ ಸೇವೆ, ವಿದ್ಯಾರ್ಥಿಗಳ ಮೇಲಿನ ಕಾಳಜಿ, ವಿವಿಧ ರಂಗಗಳಲ್ಲಿ ಅವರು ತೊಡಗಿಸಿಕೊಂಡ ಉತ್ಸಾಹದ ಚಟುವಟಿಕೆಗಳನ್ನು ಗುರುತಿಸಿ ಶ್ರೀಮತಿ ರಾಜೇಶ್ವರಿ ಇವರನ್ನು ಗುರುಭೂಷಣ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಕರ್ನಾಟಕ ರಾಜ್ಯದಲ್ಲಿಯೇ ಅತ್ಯುತ್ತಮ ಸಂಘಟನೆಯ ಮೂಲಕ ರಾಜ್ಯದ ಆಸಕ್ತ ಶಿಕ್ಷಕರಿಗೆ ತಮ್ಮ ಶೈಕ್ಷಣಿಕ ಕಾರ್ಯ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಅಚ್ಚುಕಟ್ಟಾಗಿ, ಶಿಸ್ತಿನ ಮೂಲಕ ಸಮಯ ಪ್ರಜ್ಞೆಯೊಂದಿಗೆ ಮುನ್ನುಡಿ ಬರೆಯುವ ನೂರಾರು ಸಂಕಲ್ಪದೊಂದಿಗೆ ವಿನೂತನ ತರಬೇತಿಗಳನ್ನು ನೀಡುವ ನಿಟ್ಟಿನಲ್ಲಿ ಪ್ರತಿಯೊಬ್ಬ ಶಿಕ್ಷಕರ ಹೃದಯದಲ್ಲಿ ಅಚ್ಚಳಿಯದೆ ಉಳಿದಿರುವ ಕರ್ನಾಟಕ ರಾಜ್ಯ ಶಿಕ್ಷಕರ ಪ್ರತಿಭಾ ಪರಿಷತ್ತು,(ರಿ) ಮೈಸೂರು ಇವರು ಪ್ರತಿವರ್ಷವೂ ನಡೆಸಿಕೊಂಡು ಬರುತ್ತಿರುವ ಹಿನ್ನೆಲೆಯಲ್ಲಿ, ಈ ವರ್ಷ ಒಂದು ಹೆಜ್ಜೆ ಮುಂದೆ ಶಿಕ್ಷಕರಿಗಾಗಿ ಶಿಕ್ಷಕರಿಂದ ಶಿಕ್ಷಕರಿಗೊಸ್ಕರ ಎನ್ನುವಂತೆ ಶಿಕ್ಷಕರಿಂದ ಉದಯಿಸಿದ ಈ ಪರಿಷತ್ತು ರಾಜ್ಯ ಮಟ್ಟದ ಶೈಕ್ಷಣಿಕ ಸಮ್ಮೇಳನವನ್ನು ಆಯೋಜಿಸಿದ್ದು. ಈ ಸಮ್ಮೇಳನವು ಸೂರ್ಯ ಫೌಂಡೇಶನ್ ಹಾಗೂ

ಸ್ಪಾರ್ಕ್ ಅಕಾಡೆಮಿ ಸಹಯೋಗದಲ್ಲಿ ನಡೆಯಲಿದ್ದು, ಈ ಸಮ್ಮೇಳನವು ರಾಜ್ಯ ರಾಜಧಾನಿ ಬೆಂಗಳೂರಿನ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾದ ಇಂಡೋ ಗ್ಲೋಬ್ ಶಿಕ್ಷಣ ಸಂಸ್ಥೆ, ಬೆಂಗಳೂರಿನಲ್ಲಿ ಬುಧವಾರ ದಿನಾಂಕ 16.10.2024 ರಂದು ಬೆಳಿಗ್ಗ 10–00 ಗಂಟೆಗೆ ಆರಂಭವಾಗುವ ಸಮ್ಮೇಳನದ ವೇದಿಕೆಯಲ್ಲಿ ಪ್ರಮುಖ ಗಣ್ಯ ಮಾನ್ಯರ ಉಪಸ್ಥಿತಿಯಲ್ಲಿ ಶ್ರೀಮತಿ ರಾಜೇಶ್ವರಿ ಊ ಆ ಇವರಿಗೆ ಗುರುಭೂಷಣ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಕರ್ನಾಟಕ ರಾಜ್ಯ ಶಿಕ್ಷಕರ ಪ್ರತಿಭಾ ಪರಿಷತ್ತಿನ ರಾಜ್ಯಾಧ್ಯಕ್ಷರಾದ ಪಿ ಮಹೇಶ್, ಸೂರ್ಯ ಫೌಂಡೇಶನ್ ಸಂಸ್ಥಾಪಕರಾದ ಸೋಮೇಶ ನವೋದಯ, ಸಂತೋಷ್ ಬಂಡೆ, ಚಂದ್ರಶೇಖರ ನಾಯಕ್, ಉಮಾದೇವಿ ಗುಡ್ಡದ ಅವರು ಉಪಸ್ಥಿತರಿರುವರು ಎಂದು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ವ್ಯಸನ ಮುಕ್ತರ ಸಮಾವೇಶ ಕಾರ್ಯಕ್ರಮ



● ವಾರ್ತಾಲೋಕ ವಾರ್ತೆ



**ಕೊಟ್ಟೂರು :ಅ16**. ಓಂ ಶ್ರೀ ಮಂಜುನಾಥಾಯ ನಮಃ

ಇಂದು ಕೊಟ್ಟೂರು ಮತ್ತು ಕೂಡ್ಲಿಗಿ ತಾಲ್ಲೂಕಿನ ಸಹಭಾಗಿತ್ವದಲ್ಲಿ ಕೊಟ್ಟೂರಿನ ಬನಶಂಕರಿ ಸಮುದಾಯ ಭವನದಲ್ಲಿ ಗಾಂಧಿ ಸ್ಮೃತಿ ಮತ್ತು ವ್ಯಸನ ಮುಕ್ತರ ಸಮಾವೇಶ ಕಾರ್ಯಕ್ರಮ ಹಮ್ಮಿಕೊಂಡಿದ್ದು ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಜನಜಾಗೃತಿ ವೇದಿಕೆ ಕೊಪ್ಪಳ ಪ್ರಾದೇಶಿಕ ವಿಭಾಗದ ಯೋಜನಾಧಿಕಾರಿ ಯವರಾದ ನಾಗೇಶ್ ಸರ್ ರವರು ನವಜೀವನ ಸದಸ್ಯರನ್ನು ಉದ್ದೇಶಿಸಿ ಮಾತನಾಡುತ್ತ ಬೆಂಕಿ ದೇಹವನ್ನು ಸುಟ್ಟರೆ ಸಾರಾಯಿ ಆತ್ಮವನ್ನು ಸುಡುತ್ತದೆ ಎಂದು ಮಹಾತ್ಮ ಗಾಂಧೀಜಿ ಯವರು ತಿಳಿಸಿದ್ದಾರೆ ಮಹಾತ್ಮ ಗಾಂಧೀಜಿಯವರು ಕಂಡಂತಹ ದುಶ್ಚಟ ಮುಕ್ತ ಸಮಾಜದ ಕನಸನ್ನು ಇಂದು ನನಸು ಮಾಡುತ್ತಿರುವರು ಪೂಜ್ಯ ವೀರೇಂದ್ರ ಹೆಗ್ಗಡೆ ಯವರು 1992 ರಲ್ಲಿ ಜನಜಾಗೃತಿ ವೇದಿಕೆ ಪ್ರಾರಂಭ ಮಾಡಿ ಇಲ್ಲಿಯವರೆಗೆ 1871 ಮದ್ಯ ವರ್ಜನ ಶಿಬಿರ ಗಳನ್ನು ಮಾಡಿ ಸುಮಾರು 136000 ಸದಸ್ಯರನ್ನು ದುಶ್ಚಟದಿಂದ ಹೊರಬರುವಂತೆ ಉತ್ತಮ ಬದುಕನ್ನು ಕಟ್ಟಿಕೊಳ್ಳುವಂತೆ, ನೆಮ್ಮದಿಯಿಂದ ಜೀವನ ನಡೆಸಲು ಅವಕಾಶ ಮಾಡಿಕೊಟ್ಟಿದ್ದಾರೆ ಅಲ್ಲದೆ ದುಶ್ಚಟಕ್ಕೆ ದಾಸರಾಗುವ ಮೊದಲೇ ಯುವ ಸ'ವ'ು ಊ ಹ'ವ'ನ'ು ಜಾ ಗೃ ತಿ ಗೊ ಳಿ ಸ ಬೇ ಕೆಂ ಬ ಕಾರಣಕ್ಕಾಗಿ ಜನಜಾಗೃತಿ ವೇದಿಕೆ ವತಿಯಿಂದ ಶಾಲಾ–ಕಾಲೇಜುಗಳಲ್ಲಿ ಸ್ವಾಸ್ತ್ಯ ಸಂಕಲ್ಪ ಕಾರ್ಯಕ್ರಮದ ಮೂಲಕ ಅರಿವನ್ನು ಮೂಡಿಸುವ ಪ್ರಯತ್ನ ಮಾಡಲಾಗುತ್ತಿದೆ. ಅಲ್ಲದೆ ಜನಜಾಗೃತಿ ವೇದಿಕೆ ಮೂಲಕ ಶೌರ್ಯ ವಿಪತ್ತು ನಿರ್ವಹಣೆ , ಗ್ರಾಮ ಕಲ್ಯಾಣ ಕಾರ್ಯಕ್ರಮ, ಸಾಮಾಜಿಕ ಅರಣ್ಯಕಾರಣ ಕಾರ್ಯಕ್ರಮ ಗಳನ್ನು ಮಾಡಲಾಗುತ್ತಿದೆ ಎಂದು ತಿಳಿಸಿದರು.

ಕಾವಲಿ ಶಿವಪ್ಪ ರವರು ಮಾತನಾಡಿ ಮದ್ಯ ವರ್ಜನ ಶಿಬಿರ ದಿಂದ ಕುಡಿತ ಬಿಟ್ಟು ಕುಟುಂಬಕ್ಕೆ ಬೇಕಾದ ಒಳ್ಳೆಯ ವ್ಯಕ್ತಿಗಳಾಗಿ ಬಾಳಬೇಕು ಎಂದು ಶುಭ ಹಾರೈಸಿದರು.

ಪಟ್ಟಣ ಪಂಚಾಯಿತಿ ಉಪಾಧ್ಯಕ್ಷರಾದ ಸಿದ್ದಯ್ಯರವರು ಮಾತನಾಡಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆಯ ಮೂಲಕ ಆಗುತ್ತಿರುವ ಕಾಂ ು ್ ರ ಕ್ರ ವ ು ಗ ಳಿಂ ದ ಎಷ್ಟೋ ಕುಟುಂಬಗಳಿಗೆ ಒಳ್ಳೆಯದಾಗಿದೆ ಯಾವತ್ತೂ ನಾವು ಯೋಜನೆಯ ಜೊತೆ ಇರುತ್ತೇವೆ ಎಂದು ಎಂದು ತಿಳಿಸಿದರು.

ಕಾರ್ಯಕ್ರಮ ದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದ 1841 ನೇ ಮದ್ಯವರ್ಜನ ಶಿಬಿರದ ಅಧ್ಯಕ್ಷರಾದ ಮೈದೂರು ಶಿವಣ್ಣರವರು ಕ್ಷೇತ್ರದ ಮೂಲಕ ಪೂಜ್ಯರು ಸಮಾಜಕ್ಕೆ ಕೊಡುತ್ತಿರುವ ಸಮಾಜಮುಖಿ ಕಾರ್ಯಕ್ರಮಗಳ ಬಗ್ಗೆ ಮೆಚ್ಚುಗೆಯನ್ನು ವ್ಯಕ್ತಪಡಿಸಿ ನಮ್ಮ ಜೀವನ ಸಮಿತಿ ಸದಸ್ಯರ ಮುಂದಿನ ಭವಿಷ್ಯಕ್ಕೆ ಶುಭ ಕೋರಿದರು. ಉಳಿದಂತೆ ಜನಜಾಗೃತಿ ಸದಸ್ಯರಾದ ಕೂಡ್ಲಿಗಿ ಸಿದ್ದೇಶ್, ಕೊಟ್ಟೂರಿನ ಮಲ್ಲಿಕಾರ್ಜುನಪ್ಪ, ಯೋಗೀಶ್ವರ ದಿನ್ನೆ, ವ್ಯವಸ್ಥಾಪನ ಸಮಿತಿ ಉಪಾಧ್ಯಕ್ಷರಾದ ಹಾಳ್ಯದ ತೋಟದ ಶಿವಣ್ಣ ಕಾರ್ಯಕ್ರಮದ ಕುರಿತು ಹರ್ಷವನ್ನು ವ್ಯಕ್ತಪಡಿಸಿ ನವ ಜೀವನ ಸಮಿತಿಯ ಸದಸ್ಯರ ಮುಂದಿನ ಜೀವನಕ್ಕೆ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಕೂಡ್ಲಿಗಿ ಕ್ಷೇತ್ರ ಯೋಜನಾಧಿಕಾರಿ ಸಂತೋಷ್, ಕೊಟ್ಟೂರಿನ ಕ್ಷೇತ್ರ ಯೋಜನಾಧಿಕಾರಿ ನವೀನ್ ಕುಮಾರ್, ವ್ಯವಸ್ಥಾಪನ ಸಮಿತಿಯ ಉಪಾಧ್ಯಕ್ಷರುಗಳಾದ ಶ್ರೀಮತಿ ಉಮಾದೇವಿ, ಜನಜಾಗೃತಿ ಸದಸ್ಯರಾದ ಗುಂಡಪ್ಪ, ಯೋಜನೆಯ ಮೇಲ್ವಿಚಾರಕ ಹಂತದ ಸಿಬ್ಬಂದಿಗಳಾದ ರುದ್ರೇಶ್, ಮಾಂತೇಶ್, ಜಗದೀಶ್, ಸೌಮ್ಯ, ವೀರೇಶ್ , ಕಚೇರಿ ಸಿಬ್ಬಂದಿ ಶಶಿಕುಮಾರ್ & ಸೇವಾ ಪ್ರತಿನಿಧಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ನವ ಜೀವನ ಸಮಿತಿ ಸದಸ್ಯರು ಮತ್ತು ಅವರ ಕುಟುಂಬದವರು ಭಾಗವಹಿಸಿದ್ದರು.

ವರದಿ ಪರಶುರಾಮ್.




# ಮಡಿಕೇರಿ: ಭಾವವೈವಿಧ್ಯದ ಬಹುಭಾಷಾ ಕವಿಗೋಷ್ಠಿ

**ಮಡಿಕೇರಿ:** 'ಮತ್ತದೇ ಬೇಸರ ಅದೇ ಸಂಜೆ ಅದೇ ಏಕಾಂತ' ಎಂಬ ಕವಿ ನಿಸಾರ ಅಹಮ್ಮದ್ ಅವರು ಬರೆದ ಹಾಡು ಸಂಗೀತ ನಿರ್ದೇಶಕ ಎಂ.ಆರ್.ಚರಣ್ ರಾಜ್ ಅವರ ಇಂಪಾದ ಕಂಠದಲ್ಲಿ ಹೊರಹೊಮ್ಮುವ ಮೂಲಕ ಇಲ್ಲಿನ ಗಾಂಧಿ ಮೈದಾನದಲ್ಲಿ ನಡೆದ ಬಹುಭಾಷಾ ಕವಿಗೋಷ್ಠಿಗೆ ಅರ್ಥಪೂರ್ಣವಾದ ಪೀಠಿ–ಕೆಯೊಂದನ್ನು ಹಾಕಿಕೊಟ್ಟಿತು.

ಮಡಿಕೇರಿ ನಗರ ದಸರಾ ಸಮಿತಿಯಿಂದ ಇಲ್ಲಿ ಬುಧವಾರ ನಡೆದ ಬಹುಭಾಷಾ ಕವಿಗೋಷ್ಠಿಯಲ್ಲಿ ಒಟ್ಟು 63ಕ್ಕೂ ಹೆಚ್ಚು ಕವನಗಳು ಕೇಳಿ ಬಂದವು.

ವಾಚಿಸಿದ ಕವನಗಳಲ್ಲಿ ವಾಚ್ಯಾರ್ಥವಷ್ಟೇ ಇದ್ದ ಕವನಗಳಿದ್ದವು, ಧ್ವನ್ಯಾರ್ಥವನ್ನು ಒಳಗೊಂಡ ಕವನಗಳೂ ಇದ್ದವು. ಉಪಮೆ, ರೂಪಕ, ಪ್ರತಿಮೆಗಳು ಸಾಕಷ್ಟಿದ್ದವು. ಮಕ್ಕಳಿಂದ ಹಿಡಿದು, ಹಿರಿಯರವರೆಗೆ ಕವನ ವಾಚಿಸಿದರು. ಕನ್ನಡ, ತಮಿಳು, ಮಲಯಾಳಂ, ತೆಲುಗು, ಮರಾಠಿ, ಕುಂಬಾರ, ಹವ್ಯಕ, ಯರವ, ಬ್ಯಾರಿ, ತಮಿಳು, ಕೊಡವ, ಅರೆಭಾಷೆ, ಇಂಗ್ಲಿಷ್, ಹಿಂದಿ ಸೇರಿದಂತೆ ಅನೇಕ ಭಾಷೆಗಳ ಕವನಗಳು 'ಕವನಗಳ ಮಹಾಸಾಗರನ್ನೇ' ಸೃಷ್ಟಿ ಮಾಡಿದವು.

ಆರಂಭದಲ್ಲೇ ಕವಿಗೋಷ್ಠಿ ಸಮಿತಿ ಅಧ್ಯಕ್ಷ ಉಜ್ವಲ್ ರಂಜಿತ್ ಅವರು ಈ ಬಾರಿ ಕವಿಗೋಷ್ಠಿಗೆ 213ಕ್ಕೂ ಹೆಚ್ಚು ಕವನಗಳು ಬಂದಿದ್ದವು. ಅವುಗಳಲ್ಲಿ 63 ಕವನಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ಎಂದು ಹೇಳುವ ಮೂಲಕ ಈ ಬಾರಿ ಕವಿಗೋಷ್ಠಿಗೆ ಕವಿಮನಸ್ಸುಗಳಿಂದ ಸಿಕ್ಕ ಪ್ರತಿಕ್ರಿಯೆಗೆ ಕನ್ನಡಿ ಹಿಡಿದರು.

ಎಲ್ಲ ಕವನಗಳನ್ನೂ ಶಾಂತಚಿತ್ತವಾಗಿ ಆಲಿಸಿದ ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದ ಸಾಹಿತಿ ಹಂಚೆಟ್ಟಿರ ಫ್ಯಾನ್ಸಿ ಮುತ್ತಣ್ಣ ಅವರು, 'ಪ್ರತಿ ಕವನಗಳೂ ಸಮಾನವಾಗಿ–ತ್ತು. ಬಗೆಬಗೆಯಾಗಿತ್ತು. ಮಕ್ಕಳ ಕವನಗಳು ಅದ್ಭುತವಾಗಿತ್ತು. ದೊಡ್ಡವರ ಕವನಗಳೂ ಅಥ–'ರ್ಪೂರ್ಣವಾಗಿತ್ತು' ಎಂದು ಹೇಳುವ ಮೂಲಕ ಎಲ್ಲ ಕವನಗಳನ್ನೂ ಶ್ಲಾಘಿಸುವ ಮೂಲಕ ಕವಿಮನಸ್ಸುಗಳನ್ನು ಉಲ್ಲಾಸಿತಗೊಳಿಸಿದರು.

ಇನ್ನು ಕವಿಗೋಷ್ಠಿಯಲ್ಲಿ ವಾಚಿಸಿದ ಕವನಗಳಲ್ಲಿ ಅನೇಕ ವಿಚಾರಗಳು ಪ್ರತಿಫಲಿತಗೊಂಡವು. ಪ್ರಕೃತಿ, ಭೂಕುಸಿತ, ಎಲ್ಲರೂ ಒಂದು ಹೀಗೆ ನಾನಾ ಭಾವಲಹ–ರಿಗಳು ಕವನಗಳಲ್ಲಿ ಹಾಸು ಹೊಕ್ಕಾಗಿದ್ದವು.

'ಸದ್ದಿಲ್ಲದೇ ಆರೋಗ್ಯ ಕದ್ದದ್ದು, ಎದೆ ಬುಟ್ಟಿಯ ಕಸವನ್ನು ವಿಲೇವಾರಿ ಮಾಡಿ ಹಗುರಾಗಿ ಬಿಡೋಣ' ಹೀಗೆ ಅನೇಕ ಪದಪುಂಜಗಳು ಚಕಿತಗೊಳಿಸಿದವು.

ಈರಮಂಡ ಹರಿಣಿ ವಿಜಯ್ ಅವರ 'ಮನುಜಮತ ವಿಶ್ವಪಥ' ಕವನವು ಭಿನ್ನತೆಯ ತೊರೆಯಬೇಕು, ಎಲ್ಲರೂ ಒಂದು ಎಂಬ ಭಾವ ಮೂಡಿಸಬೇಕು ಎಂದು ಹೇಳುವ ಮೂಲಕ ಸಮಕಾಲೀನ ಸಂಗತಿಗಳಿಗೆ ಕನ್ನಡಿ ಹಿಡಿಯಿತು. 4ನೇ ತರಗತಿ ವಿದ್ಯಾರ್ಥಿನಿ ತಿಶ್ಯ ಪೊನ್ನೇಟಿಯ 'ನನ್ನ ತಮ್ಮ' ಕವನ ನವಿರಾದ ಭಾವವೊಂದನ್ನು ಹೊಮ್ಮಿಸುವಲ್ಲಿ ಸಫಲವಾಯಿತು.

'ಕಾವ್ಯೋದ್ಯಾನ' ಪುಸ್ತಕವನ್ನು ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಲಾಯಿತು. ಕವಿಗಳನ್ನು ಹೊರತುಪಡಿಸಿ ಸಭಿಕರ ಸಂಖ್ಯೆ ತೀರಾ ಕ್ಷೀಣಿಸಿತ್ತು. ಖಾಲಿ ಕುರ್ಚಿಗಳೆ ಕಂಡು ಬಂದವು.

ಜಾನಪದ ಪರಿಷತ್ತಿನ ಕೊಡಗು ಜಿಲ್ಲಾ ಘಟಕದ ಅಧ್ಯಕ್ಷ ಬಿ.ಜಿ.ಅನಂತಶಯನ, ಸೋಮವಾರಪೇಟೆ ತಾಲ್ಲೂಕು ಅಭಿವೃದ್ಧಿ ಹೋರಾಟ ಸಮಿತಿ ಅಧ್ಯಕ್ಷರಾದ ಅರುಣ್ ಕೊತ್ನಳ್ಳಿ, ಸಾಹಿತಿ ಕಟ್ರತನ ಲಲಿತಾ ಅಯ್ಯಣ್ಣ, ನಗರ ದಸರಾ ಸಾಂಸ್ಕೃತಿಕ ಸಮಿತಿ ಅಧ್ಯಕ್ಷ ಎಚ್.ಟಿ.ಅನಿಲ್ ಭಾಗವಹಿಸಿದ್ದರು.

# ಕನ್ನಡಜ್ಯೋತಿಹೊತ್ತ 'ರಥಯಾತ್ರೆ'ಯನ್ನು ಅದ್ದೂರಿಯಿಂದ ಸ್ವಾಗತಿಸಲು ಕುರಗೋಡು ತಹಶೀಲ್ದಾರ್ ನರಸಪ್ಪ ಮನವಿ

**ಕುರುಗೋಡು** ; 2024ನೇ ಸಾಲಿನ ಕನ್ನಡ ರಾಜ್ಯೋತ್ಸವ ಆಚರಣೆ ಹಾಗು 87ನೇ ಅಖಿಲಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಕನ್ನಡ ಜ್ಯೋತಿಹೊತ್ತ ಕನ್ನಡ ರಥಯಾತ್ರೆ ಅ.20 ರಂದು ಕುರುಗೋಡು ಪಟ್ಟಣಕ್ಕೆ ಆಗಮಿಸುತ್ತಿದ್ದು, ಆ ರಥಯಾತ್ರೆಯನ್ನು ಸಕಲ ಗೌರವಗಳೊಂದಿಗೆ ತಾಲೂಕು ಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳು, ಕಸಾಪ, ಹಾಗು ಕನ್ನಡಪರ ಸಂಘಟನೆಗಳ ಕಾರ್ಯಕರ್ತರು, ಕನ್ನಡಾಭಿಮಾನಿಗಳು ಎಲ್ಲರೂ ಸೇರಿದಂತೆ ಅದ್ದೂರಿಯಿಂದ ಸ್ವಾಗತಿಸಬೇಕೆಂದು ಕುರಗೋಡು ತಹಶೀಲ್ದಾರ್ ನರಸಪ್ಪತಹಶೀಲ್ದಾರ್ ಅವರು ಎಲ್ಲರಲ್ಲಿ ಮನವಿಮಾಡಿದರು.

ಜೊತೆಗೆ ಅಂದು ಕುರುಗೋಡು ತಾಲೂಕು ಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಶಾಲಾ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಕನ್ನಡರಥಯಾತ್ರೆಯನ್ನು ಸಂಭ್ರಮ–ಸಡಗರದಿಂದ ಸ್ವಾಗತಿಸಿ, ನಂತರ ಬಳ್ಳಾರಿಗೆ ಬೀಳ್ಕೊಡುಗೆ ಮಾಡಲಾಗುವುದು ಎಂದು ತಿಳಿಸಿದರು.



ರಥಯಾತ್ರೆಯ ಅಂಗವಾಗಿ ಬಳ್ಳಾರಿರಸ್ತೆ, ಕಂಪ್ಲಿರಸ್ತೆ, ಬಾದನಹಟ್ಟಿರಸ್ತೆ ಸೇರಿದಂತೆ ಇತರೆ ಮಾರ್ಗಗಳಲ್ಲಿ ಕನ್ನಡಭಾವುಟಗಳನ್ನು ರಾರಾಜಿಸುವಂತೆ ಮಾಡಬೇಕೆಂದು ನುಡಿದರು. ಇದಕ್ಕೆ ಪ್ರತಿಯಾಗಿ ಕನ್ನಡಪರ ಸಂಘಟನೆಗಳ ಕಾರ್ಯಕರ್ತರು ಎಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಥಯಾತ್ರೆಯನ್ನು ಅದ್ದೂರಿಯಿಂದ ಬರಮಾಡಿಕೊಳ್ಳೋಣ ಎಂದು ಎಲ್ಲರೂ ಚರ್ಚಿಸಿ ತಿರ್ಮಾನಿಸಿದರು.

ಇದೇ ಸಂದರ್ಭದಲ್ಲಿ ನಾಡಿನ ಕಿತ್ತೂರುರಾಣಿಚೆನ್ನಮ್ಮ ಅವರ ಜಯಂತಿಯ ಪೂರ್ವಸಿದ್ದತಾ ಸಭೆ ಜರುಗಿತು. ಇದೇ ಮಾದರಿಯಲ್ಲಿ ನಂ.1 ರಂದು ಜರುಗುವ ಕನ್ನಡ ರಾಜ್ಯೋತ್ಸವದ ಅಂಗವಾಗಿ ಪೂರ್ವಸಿದ್ದತಾ ಸಭೆಯು ಜರುಗಿತು. ಪೂರ್ವಸಿದ್ದತಾ ಸಭೆಯಲ್ಲಿ ಗ್ರೇಡ್2 ತಹಶೀಲ್ದಾರ್ ಮಲ್ಲೇಶಪ್ಪ, ಪುರಸಭೆ ಮುಖ್ಯಾಧಿಕಾರಿ ಹರ್ಷವರ್ದನರೆಡ್ಡಿ, ಕಛೇರಿಯ ಶಿರಸ್ತೆದಾರ್ ವಿಜಯಕುಮಾರ್, ಆರ್ಐ.ಸುರೇಶ, ಕಸಾಪ. ನ ತಾಲೂಕು ಅಧ್ಯಕ್ಷ ನಾಗರಾಜಮಸೂತಿ, ಮೃತ್ಯುಂಜಯಯಾದವ್,ಹನುಮಂತಪ್ಪ, ಗುಡಿಸಲಿರಾಜ, ಹಂಪಿಬಸವರಾಜ, ದುರ್ಗಾಪ್ರಸಾದ್, ಗುರುಮೂರ್ತಿಆಚಾರಿ, ಜಕ್ಕಂಡಿರಮೇಶ, ಕೆಎಂ.ಉಮಾಪತಿಗೌಡ,ಬಸವನಗೌಡ, ಆಚಾರಿ, ಶಿಕ್ಷಕಬಸವರಾಜ, ಕಿರಣ್, ಇತರೆ ತಾಲೂಕುಮಟ್ಟದ ಅಧಿಕಾರಿಗಳು ಸೇರಿದಂತೆ ಪ್ರವೀಣಶೆಟ್ಟಿಬಣ, ಶಿವರಾಮೇಗೌಡಬಣ, ಮತ್ತು ಸಿರಿಗನ್ನಡಯುವಕಸಂಘಗಳ ಕನ್ನಡಪರಸಂಘಟನೆಗಳ ಕನ್ನಡಪರ ಸಂಘಟನೆಗಳ ಮುಖಂಡರು ಇದ್ದರು.

VARTHALOKA Kannada Daily Morning News Paper Printed at NIKHIL OFFSET PRINTES Ward No. 23, Buddha Circle, Hosalli Main Road, GANGAVATHI-583227. Dist: Koppal,
Editor & Published by Mohammed jeelan. G., Rajasab Compound, Opp. Kulayappa Building, 1st Cross, Patel Nagar, HOSPET Dist : Vijaynagar, Mob. No.: 9482156289 E-Mail: Varthalokahpt@gmail.com